ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –248 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:24–04–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 248 | RNI No: KARKAN/2023/88462 | KA/SK/CTA-874/2024-2026 | Chitradurga | Date: 24-04-2025 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಆಶ್ರಯ ಯೋಜನೆ ಜಮೀನು ಮಂಜೂರಾತಿ: ವಾರದೊಳಗೆ ಪ್ರಸ್ತಾವನೆ ಸಲ್ಲಿಸಿ 2
ಭಯೋತ್ಪಾದಕರಿಗೆ ಬಲಿಯಾದವರ ಆತ್ಮಕ್ಕೆ ಶಾಂತಿ ಕೋರಿ ಕಾಂಗ್ರೆಸ್‌ನಿಂದ ಸಂತಾಪ 3
ಶ್ರೀಗುರುತಿಪ್ಪೇರುದ್ರ ಸ್ವಾಮಿ ದೇವಸ್ಥಾನದ ಹುಂಡಿಯಲ್ಲಿ 66.29 ಲಕ್ಷ ಹಣ ಸಂಗ್ರಹ 4

ಸುದ್ದಿ, ಜಾಹಿರಾತಿಗೆ 9686622252

# ಬಿಜೆಪಿ ಜನಾಕ್ರೋಶ ಯಾತ್ರೆ ಮುಂದಕ್ಕೆ

» ಚಿತ್ರದುರ್ಗ

ರಾಜ್ಯ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿ ವಿರೋಧಿಸಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಜನಾಕ್ರೋಶ ಯಾತ್ರೆ ನಾಳೆ ಬೆಳಿಗ್ಗೆ 11 ಕ್ಕೆ ಚಿತ್ರದುರ್ಗ ಪ್ರವೇಶಿಸಬೇಕಿತ್ತು. ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿರುವ ದಾಳಿಗೆ 26 ಮಂದಿ ಬಲಿಯಾಗಿದ್ದು, ಕರ್ನಾಟಕದ ಇಬ್ಬರ ಮೃತದೇಹಗಳು ರಾಜ್ಯಕ್ಕೆ ಬರುತ್ತಿರುವುದರಿಂದ ಶೋಕ ವ್ಯಕ್ತಪಡಿಸುವುದಕ್ಕಾಗಿ ಜನಾಕ್ರೋಶ ಯಾತ್ರೆಯನ್ನು ಮುಂದೂಡಿರುವುದಾಗಿ ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ ತಿಳಿಸಿದರು.

ಬಿಜೆಪಿ.ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಸಂಜೆ ನಗರದಲ್ಲಿ ಮೌನ ಮೆರವಣಿಗೆ ನಡೆಸಿ ದಾಳಿಯಲ್ಲಿ ಬಲಿಯಾದವರ ಆತ್ಮಕ್ಕೆ ಶಾಂತಿ ಕೋರಲಾಗುವುದೆಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ ಪ್ರವಾಸಿ ತಾಣ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಬೆಂಬಲಿತ ಉಗ್ರಗಾಮಿಗಳು ನಡೆಸಿರುವ ದಾಳಿಯಲ್ಲಿ 26 ಮಂದಿ ಅಮಾಯಕರು




ಬಲಿಯಾಗಿರುವುದನ್ನು ನಾವುಗಳು ಖಂಡಿಸುತ್ತೇವೆ. ದುಷ್ಟಕೂಟಕ್ಕೆ ನಮ್ಮ ದೇಶದ ಪ್ರಧಾನಿ ಮೋದಿರವರು ತಕ್ಕ ಪಾಠ ಕಲಿಸದೆ ಬಿಡುವುದಿಲ್ಲ. ದಾಳಿಯಲ್ಲಿ ಬಲಿಯಾದವರಿಗೆ ಸಂಜೆ ರಾಜ್ಯದ ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಕ್ಯಾಂಡಲ್ ಮೆರವಣಿಗೆ ನಡೆಸಲಾಗುವುದೆಂದರು.

ಪಾಕಿಸ್ಥಾನ ಬೆಂಬಲಿತ ಉಗ್ರಗಾಮಿಗಳು ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ನಡೆಸಿ ದೇಶದ ಶಾಂತಿಯನ್ನು ಕದಡುತ್ತಿದ್ದಾರೆ. ನಮ್ಮ ದೇಶದ ಪ್ರಧಾನಿ ಮೋದಿ ಹಾಗೂ ಗೃಹಮಂತ್ರಿ ಅಮಿತ್‌ಷಾ ಇವರುಗಳು ಉಗ್ರಗಾಮಿಗಳಿಗೆ ತಕ್ಕ ಪಾಠ ಕಲಿಸುತ್ತಾರೆ. ಪ್ರವಾಸಿಗರು ಯಾರೂ ಭಯ ಪಡುವುದು ಬೇಡ ಎಂದರು.

ಚಿತ್ರದುರ್ಗ ಮೆಡಿಕಲ್ ಕಾಲೇಜಿಗೆ ನೇಮಕಾತಿಯಲ್ಲಿ ಮಾನದಂಡಗಳನ್ನು ಗಾಳಿಗೆ ತೂರಿ ಲಕ್ಷಾಂತರ ರೂ.ಗಳ ಅವ್ಯವಹಾರವಾಗಿರುವುದು ತನಿಖೆಯಾಗಬೇಕು. ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಚಿತ್ರದುರ್ಗಕ್ಕೆ ಆಗಮಿಸಿ ನೇಮಕಾತಿಯಲ್ಲಿ ಆಗಿರುವ ಭ್ರಷ್ಟಾಚಾರದ ಬಗ್ಗೆ ಗಮನ ಕೊಡಬೇಕು. ಕೆ.ಡಿ.ಪಿ.ಸಭೆಯಲ್ಲಿ ಇಂತಹ ವಿಷಯಗಳು ಚರ್ಚೆಗೆ ಬರುವುದಿಲ್ಲ. 2013 ರಲ್ಲಿ ಮೆಡಿಕಲ್ ಕಾಲೇಜು ಮಂಜೂರಾಗಿದ್ದು, 2025 ರಲ್ಲಿ ಆರಂಭಗೊಂಡಿದೆ. ನೇಮಕಾತಿ ಅವ್ಯವಹಾರದಲ್ಲಿ ಭಾಗಿಯಾಗಿರುವವರನ್ನು ಕೂಡಲೆ ಸೇವೆಯಿಂದ ವಜಾಗೊಳಿಸಬೇಕು. ಈ ವಿಚಾರಕ್ಕೆ ಸಂಬಂಧಿಸಿದಂತೆ ಸಚಿವ ಶರಣ ಪ್ರಕಾಶ್ ಪಾಟೀಲ್‌ರವರಿಗೆ ಪತ್ರ ಬರೆಯುತ್ತೇನೆಂದು ತಿಳಿಸಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ಭಾರತದ ಪ್ರವಾಸಿ ತಾಣ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ 26 ಮಂದಿ ಬಲಿಯಾಗಿರುವುದು ಅತ್ಯಂತ ಖಂಡನೀಯ. ಈ ವಿಚಾರದಲ್ಲಿ ಯಾವ ಪಕ್ಷಗಳು ರಾಜಕಾರಣ ಮಾಡಬಾರದು. ದೇಶದ ಐಕ್ಯತೆ ದೃಷ್ಟಿಯಿಂದ ಎಲ್ಲರೂ ಒಗ್ಗಟ್ಟು ಪ್ರದರ್ಶಿಸಬೇಕು. ಪುಲ್ವಾಮಾ ದಾಳಿ ನಡೆದಾಗ ಅದಕ್ಕೆ ಪ್ರತಿಯಾಗಿ ಸರ್ಜಿಕಲ್ ಸ್ಟ್ರೈಕ್ ನಡೆದಿಲ್ಲಾ ಎಂದು ವಿರೋಧ ಪಕ್ಷದವರು ಗೇಲಿ ಮಾಡಿದ್ದುಂಟು. ಒಟ್ಟಾರೆ ಪಹಲ್ಗಾಮ್ ದಾಳಿಗೆ ರಾಜಕೀಯ ಬಣ್ಣ ಹಚ್ಚುವುದು ಬೇಡ ಎಂದರು.

ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್‌ಸಿದ್ದಾಪುರ, ಸಂಪತ್, ನಗರ ಮಂಡಲ ಅಧ್ಯಕ್ಷ ಲೋಕೇಶ್, ಗ್ರಾಮಾಂತರ ಮಂಡಲ ಅಧ್ಯಕ್ಷ ನಾಗರಾಜ್, ಕರ್ನಾಟಕ ರಾಜ್ಯ ರೈತ ಮೋರ್ಚ ಕಾರ್ಯದರ್ಶಿ ಮಲ್ಲಿಕಾರ್ಜುನ್, ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್‌ಯಾದವ್, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಛಲವಾದಿ ತಿಪ್ಪೇಸ್ವಾಮಿ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಏ.25 ರಂದು ಕನ್ನಡ ಕರಡು ತಿದ್ದುವ ಕಾರ್ಯಾಗಾರ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಸಿರಿಗೆರೆ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪುಸ್ತಕ ದಿನಾಚರಣೆ ಅಂಗವಾಗಿ ಕನ್ನಡ ಕರಡು ತಿದ್ದುವ ಕಾರ್ಯಾಗಾರವನ್ನು ಇದೇ ಏ.25 ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆಯ ಶ್ರೀ ಗುರುಶಾಂತೇಶ್ವರ ದಾಸೋಹ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಸಿರಿಗೆರೆ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಇತಿಹಾಸ ಸಂಶೋಧಕ ಡಾ. ಬಿ.ರಾಜಶೇಖರಪ್ಪ ಉದ್ಘಾಟನೆ ನೆರವೇರಿಸುವರು. ಸಾಹಿತಿ ಕೆ.ರಾಜಕುಮಾರ್ ಅವರು ಕಮ್ಮಟದ ನಿರ್ದೇಶಕರಾಗಿ ಭಾಗವಹಿಸುವರು. ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಡಾ.ಎಚ್.ವಿ.ವಾಮದೇವಪ್ಪ, ಸಂಸ್ಥೆಯ ವಿಶೇಷಾಧಿಕಾರಿ ವೀರಣ್ಣ ಬಿ.ಜತ್ತಿ ಉಪಸ್ಥಿತರಿರುವರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ.ಮಾನಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಡಾ.ಯಣ್ಣೆಕಟ್ಟೆ ಚಿಕ್ಕಣ್ಣ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಕನ್ನಡ ಪುಸ್ತಕ ಪ್ರಾಧಿಕಾರ ಆಡಳಿತಾಧಿಕಾರಿ ಕೆ.ಬಿ. ಕಿರಣ್ ಸಿಂಗ್ ತಿಳಿಸಿದ್ದಾರೆ.

### ಏ.29 ರಂದು ಸಾರಿಗೆ ಅದಾಲತ್

» ಚಿತ್ರದುರ್ಗ

ಪ್ರಾದೇಶಿಕ ಸಾರಿಗೆ ಅಧಿಕಾರಿಗಳವರ ಕಚೇರಿ ವತಿಯಿಂದ ಇದೇ ಏ.29 ರಂದು ಸಂಜೆ 4 ರಿಂದ 5.30 ರವರೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಆವರಣದಲ್ಲಿ ಸಾರಿಗೆ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆ ಆಲಿಸಲು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ "ಸಾರಿಗೆ ಅದಾಲತ್" ಏರ್ಪಡಿಸಲಾಗಿದೆ. ಸಾರ್ವಜನಿಕರು ಸಾರಿಗೆ ಅದಾಲತ್‌ನಲ್ಲಿ ಭಾಗವಹಿಸಿ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಹಾಗೂ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬೇಕು ಹಾಗೂ ಸಾರಿಗೆ ಅದಾಲತ್‌ನ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಕೋರಿದ್ದಾರೆ.

### ಚಿತ್ರದುರ್ಗ: ಮೇ.02ಕ್ಕೆ ತ್ರೈಮಾಸಿಕ ಕೆಡಿಪಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ ಮೇ 02 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆಯಲ್ಲಿ ಮತ್ತು ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅವರ ಉಪಸ್ಥಿತಿಯಲ್ಲಿ ಸಭೆ ನಿಗದಿಪಡಿಸಲಾಗಿದೆ. ಸಭೆಯಲ್ಲಿ ವಿವಿಧ ಇಲಾಖೆಗಳ ಕಳೆದ ಮಾರ್ಚ್ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ನಡೆಯಲಿದೆ ಎಂದು ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ತೋಟಗಾರಿಕೆ ತರಬೇತಿ: ಅರ್ಜಿ ಅವಧಿ ವಿಸ್ತರಣೆ

» ಚಿತ್ರದುರ್ಗ

ತೋಟಗಾರಿಕೆ ಇಲಾಖಾ ಅಧೀನದ ತೋಟಗಾರಿಕೆ ತರಬೇತಿ ಕೇಂದ್ರಕ್ಕೆ ರೈತ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಸ್ವೀಕೃತಿ ದಿನಾಂಕವನ್ನು ಏಪ್ರಿಲ್ 28 ಮಧ್ಯಾಹ್ನ 12 ಗಂಟೆಯವರೆಗೆ ವಿಸ್ತರಿಸಲಾಗಿದೆ. ತೋಟಗಾರಿಕೆ ತರಬೇತಿಗೆ ಸಂದರ್ಶನವು ಏಪ್ರಿಲ್ 28ರ ಮಧ್ಯಾಹ್ನ 3 ಗಂಟೆಗೆ ಚಿತ್ರದುರ್ಗ ನಗರದ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯ ತೋಟಗಾರಿಕೆ ಇಲಾಖಾ ಸಭಾಂಗಣದಲ್ಲಿ ನಿಗಧಿಯಾಗಿದೆ. ತರಬೇತಿಗೆ ಆಯ್ಕೆಯಾದವರಿಗೆ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2025 ರ ಮೇ 02 ರಿಂದ 2026 ರ ಫೆ.28 ರವರೆಗೆ 10 ತಿಂಗಳ ಕಾಲ ತೋಟಗಾರಿಕೆ ತರಬೇತಿ ನೀಡಲಾಗುವುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

## ಗ್ರಾಮೀಣ ಭಾಗದ ಜಾತ್ರೆ ಉತ್ಸವಗಳು ಎಲ್ಲಾ ಜನಾಂಗದ ಸಮಾನತೆಯ ಪ್ರತೀಕ: ಟಿ.ರಘುಮೂರ್ತಿ



» ಚಳ್ಳಕೆರೆ

ಗ್ರಾಮೀಣ ಭಾಗದಲ್ಲಿ ನಡೆಯುವ ಜಾತ್ರೆ, ಉತ್ಸವಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದೆ. ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಕಾರ್ಯಗಳಿಗೆ ಇಂದಿಗೂ ಜೀವಂತಿಕೆ ಇದೆಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿಯಲ್ಲಿ ನಡೆದ ಶ್ರೀಕೊಲ್ಲಾಪುರದಮ್ಮದೇವಿ ಜಾತ್ರೆಯಲ್ಲಿ ಭಾಗವಹಿಸಿ, ಪೂಜಾ ಕಾರ್ಯಗಳನ್ನು ನೆರವೇರಿಸಿ ನೆರೆದಿದ್ದ ಭಕ್ತರೊಂದಿಗೆ ಮಾತನಾಡಿದರು. ಗ್ರಾಮೀಣ ಭಾಗದ ಜಾತ್ರೆಯಲ್ಲಿ ವಿಶೇಷತೆ ಇರುತ್ತದೆ.

ಪ್ರತಿಯೊಬ್ಬ ವ್ಯಕ್ತಿಯಲ್ಲೂ ಭಕ್ತಿ, ಭಾವನೆ, ಶ್ರದ್ದೆ ಎದ್ದುಕಾಣುತ್ತದೆ. ಜಾತ್ರಾ ಸಂದರ್ಭದಲ್ಲಿ ಎಲ್ಲರೂ ಯಾವುದೇ ಬೇದಬಾವವಿಲ್ಲದೆ ಸೇರ್ಪಡೆಯಾಗುವ ಮೂಲಕ ಶಾಂತಿ, ಸಮಾನತೆಯನ್ನು ಪ್ರತೀಪಾದಿಸುತ್ತಾರೆ. ಇಂತಹ ಉತ್ಸವಗಳು ಇನ್ನೂ ಹೆಚ್ಚು ನಡೆಯಬೇಕು. ಕೊಲ್ಲಾಪುರದಮ್ಮ ದೇವಿಜಾತ್ರೆಯಲ್ಲೂ ಸಹ ಈ ಭಾಗದ ಎಲ್ಲರಿಗೂ ಸುಖ, ಶಾಂತಿ, ನೆಮ್ಮದಿ ಸಿಗಲಿ ಎಂದು ಪ್ರಾರ್ಥಿಸಿದ್ದೇನೆ. ಗ್ರಾಮೀಣ ಭಾಗದ ಜಾತ್ರೆಗಳು ಎಲ್ಲಾ ಸಮೂಹದಲ್ಲಿ ಸಮಾನತೆಯನ್ನು ಮೂಡಿಸುವಲ್ಲಿ ಯಶಸ್ವಿಯಾಗಿವೆ ಎಂದರು.

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಆರ್.ಕಿರಣ್‌ಶಂಕರ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ರವಿಕುಮಾರ್, ಮಾಜಿ ಸದಸ್ಯ ಬಾಬುರೆಡ್ಡಿ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಕಾಂಗ್ರೆಸ್ ಮುಖಂಡರಾದ ಕೆ.ವೀರಭದ್ರಪ್ಪ, ಬಿ.ಕೆ.ಗುಜ್ಜಾರಪ್ಪ, ಹನುಮಂತರಾಯ, ಅಂಜಿನಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## ಜಮ್ಮು-ಕಾಶ್ಮೀರದ ಪಹಲ್ಗಾಮ್ ದಾಳಿ ಖಂಡಿಸಿ: ವಿಜಯಸೇನೆ ಪ್ರತಿಭಟನೆ




» ಚಿತ್ರದುರ್ಗ

ಭಾರತದ ಪ್ರವಾಸಿ ತಾಣ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಮಂಗಳವಾರ ನಡೆಸಿರುವ ದಾಳಿಯಲ್ಲಿ ಕರ್ನಾಟಕದ ಇಬ್ಬರು ಸೇರಿ 26 ಮಂದಿ ಅಮಾಯಕರು ಬಲಿಯಾಗಿರುವುದನ್ನು ಖಂಡಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ದೇಶದ ಪ್ರಧಾನಿ ನರೇಂದ್ರಮೋದಿಗೆ ಮನವಿ ರವಾನಿಸಲಾಯಿತು.

ಕೇಂದ್ರ ಗೃಹ ಇಲಾಖೆ ಹಾಗೂ ಗುಪ್ತಚರ ಇಲಾಖೆ ವೈಫಲ್ಯ ಎದ್ದು ಕಾಣುತ್ತಿದೆ. ಜಮ್ಮು–ಕಾಶ್ಮೀರದ ಮುಖ್ಯಮಂತ್ರಿಯ ತಲೆದಂಡವಾಗಬೇಕು. 2019 ರಲ್ಲಿ ನಡೆದ ಪುಲ್ವಾಮಾ ದಾಳಿಯ ನಂತರ ಇದು ಎರಡನೆ ಅತ್ಯಂತ ಭೀಕರ ದಾಳಿಯಾಗಿದೆ. ಹಿಂದೂಗಳನ್ನು ಗುರಿಯಾಗಿಸಿಕೊಂಡಿರುವ ಉಗ್ರರನ್ನು ಸದೆ ಬಡಿಯಬೇಕು. ಆಗ ಬಲಿಯಾದವರ ಆತ್ಮಕ್ಕೆ ಶಾಂತಿ ಸಿಕ್ಕಂತಾಗುತ್ತದೆ. ದಾಳಿಯಲ್ಲಿ ಬಲಿಯಾದವರ ಕುಟುಂಬದ ಸದಸ್ಯರೊಬ್ಬರಿಗೆ ಸರ್ಕಾರಿ ನೌಕರಿ ಕೊಡಬೇಕು. ಜೊತೆಗೆ ಮೃತರಿಗೆ ತಲಾ ಒಂದು ಕೋಟಿ ರೂ.ಗಳ ಪರಿಹಾರ ಕೊಡಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾಧ್ಯಕ್ಷೆ ವೀಣಗೌರಣ್ಣ, ಗೋಪಿನಾಥ್, ಕಮಲಮ್ಮ, ಅವಿನಾಶ್, ತಿಪ್ಪೇಸ್ವಾಮಿ, ನಾಗೇಶ್, ನಾಗರಾಜ್ ಮುತ್ತು, ಶಶಿ, ವಿಜಯಬಾಬು, ಪ್ರದೀಪ್, ಹರೀಶ್‌ಕುಮಾರ್ ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ನೇಮಕಾತಿಯಲ್ಲಿ ಅವ್ಯವಹಾರ; ತನಖೆಗೆ ನವೀನ್ ಆಗ್ರಹ

» ಚಿತ್ರದುರ್ಗ

ಚಿತ್ರದುರ್ಗ ಮೆಡಿಕಲ್ ಕಾಲೇಜಿಗೆ ನೇಮಕಾತಿಯಲ್ಲಿ ಮಾನದಂಡಗಳನ್ನು ಗಾಳಿಗೆ ತೂರಿ ಲಕ್ಷಾಂತರ ರೂ.ಗಳ ಅವ್ಯವಹಾರವಾಗಿರುವುದು ತನಿಖೆಯಾಗಬೇಕು. ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಚಿತ್ರದುರ್ಗಕ್ಕೆ ಆಗಮಿಸಿ ನೇಮಕಾತಿಯಲ್ಲಿ ಆಗಿರುವ ಭ್ರಷ್ಟಾಚಾರದ ಬಗ್ಗೆ ಗಮನ ಕೊಡಬೇಕು ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಭಾರತೀಯ ಜನತಾ ಪಾರ್ಟಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚಿತ್ರದುರ್ಗ ಜಿಲ್ಲಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕರ ಆಸ್ಪತ್ರೆ ನಿರ್ದೇಶಕರಾದ ಯುವರಾಜ್ ಡಾಕ್ಟರ್‌ಗಳ ನೇಮಕಾತಿಯಲ್ಲಿ ಲಕ್ಷಾಂತರ ಅವ್ಯವಹಾರ ಮಾಡಿದ್ದಾರೆ ಮತ್ತು ನೇಮಕಾತಿಯನ್ನು ಸರಿಯಾಗಿ ಮಾಡಿರುವುದಿಲ್ಲ ಹಾಗೂ ಅಭ್ಯರ್ಥಿಗಳಿಂದ ಲಂಚವನ್ನು ಪಡೆದು ಅವ್ಯವಹಾರವಾಗಿರುವ




ಶಂಕೆಯಿದೆ ಇವರು ಭ್ರಷ್ಟನಾಗಿದ್ದು, ಇವರನ್ನು ಕೂಡಲೇ ಅಮಾನತು ಮಾಡಿ ಲೋಕಾಯುಕ್ತರಿಂದಾಗಲೀ ಅಥವಾ ಸಿಐಡಿಯಿಂದ ತನಿಖೆಯನ್ನು ನಡೆಸಬೇಕೆಂದು ಆಗ್ರಹಿಸಿದರು.

ಈ ವಿಷಯದ ಬಗ್ಗೆ ನಾವುಗಳು ಕೆ.ಡಿ.ಪಿ.ಸಭೆಯಲ್ಲಿ ಇಂತಹ ವಿಷಯಗಳು ಚರ್ಚೆಗೆ ಬರುವುದಿಲ್ಲ. ಇದರ ಬಗ್ಗೆ



ನಾವು ಪ್ರಶ್ನೆ ಮಾಡಲು ಸಿದ್ದರಿದ್ದರೂ ಸಹಾ ವಿಷಯವನ್ನು ಚರ್ಚೆಗೆ ತರುತ್ತಿಲ್ಲ ನೇಮಕಾತಿ ಸಂದರ್ಭದಲ್ಲಿ ಯಾರು ನೇಮಕಾತಿ ಮಾಡಿಕೊಳ್ಳಬೇಕು ಯಾರು ನೇಮಕಾತಿ ಮಾಡಿಕೊಳ್ಳಬಾರದು ಸರ್ಕಾರದ ಆದೇಶಗಳನ್ನು ಗಾಳಿಗೆ ತೂರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳಲ್ಲಿ ಬರೀ ಅವ್ಯವಹಾರ ಮಾಡಿರುತ್ತಾರೆ. ಆದ್ದರಿಂದ ಇವರನ್ನು ಮಾಡಿರುವ ನೇಮಕಾತಿಯನ್ನು ರದ್ದುಪಡಿಸಿ ಹೊಸ ನೇಮಕಾತಿಯನ್ನು ಮಾಡಿ ಡಾಕ್ಟರ್‌ಗಳಿಗೆ ನ್ಯಾಯ ದೊರಕಿಸಿಕೊಡಬೇಕು ತನಿಖೆ ಮುಗಿಯುವ ಇವನನ್ನು ಆಮಾನತಿನಲ್ಲಿ ಇರಿಸಬೇಕು ಎಂದು ಆಗ್ರಹಿಸಿದರು.

2013 ರಲ್ಲಿ ಮೆಡಿಕಲ್ ಕಾಲೇಜು ಮಂಜೂರಾಗಿದ್ದು, 2025 ರಲ್ಲಿ ಆರಂಭಗೊಂಡಿದೆ. ನೇಮಕಾತಿ ಅವ್ಯವಹಾರದಲ್ಲಿ ಭಾಗಿಯಾಗಿರುವವರನ್ನು ಕೂಡಲೆ ಸೇವೆಯಿಂದ ವಜಾಗೊಳಿಸಬೇಕು. ಈ ವಿಚಾರಕ್ಕೆ ಸಂಬಂಧಿಸಿದಂತೆ ಸಚಿವ ಶರಣ ಪ್ರಕಾಶ್ ಪಾಟೀಲ್‌ರವರಿಗೆ ಪತ್ರ ಬರೆಯಲಾಗುತ್ತದೆ. ಇದ್ದಲ್ಲದೆ ಮೆಡಿಕಲ್ ಕಾಲೇಜು ಚಿತ್ರದುರ್ಗದಲ್ಲಿ ಇದ್ದು ಇದರ ಕಚೇರಿಯೂ ಸಹಾ ಚಿತ್ರದುರ್ಗದಲ್ಲಿ ಇದೆ ಆದರೆ ಸಂದರ್ಶನ ಮಾತ್ರ ಬೆಂಗಳೂರಿನಲ್ಲಿ ನಡೆಸಲಾಗುತ್ತದೆ ಇದರ ಬಗ್ಗೆ ಸಚಿವ ಶರಣ ಪ್ರಕಾಶ್ ಪಾಟೀಲ್ ಗಮನಹರಿಸಬೇಕಿದೆ, ಅವರು ಚಿತ್ರದುರ್ಗಕ್ಕೆ ಬಂದು ಇಲ್ಲಿ ನಡೆಯುವ ಅವ್ಯವಹಾರವನ್ನು ಪರಿಹಾರ ಮಾಡಬೇಕೆಂದು ನವೀನ್ ಆಗ್ರಹಿಸಿದರು.

## ಫಾಸ್ಟ್ ನ್ಯೂಸ್

### ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳಲು ಸೂಚನೆ

» ಚಿತ್ರದುರ್ಗ

ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಡಾ. ಎಪಿಜೆ ಅಬ್ದುಲ್ ಕಲಾಂ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಏ.27 ರಂದು ಬೆಳಿಗ್ಗೆ 11 ರಿಂದ ಜರುಗುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಪ್ರವೇಶ ಪತ್ರವು ಇಲಾಖಾ ವೆಬ್‌ಸೈಟ್‌ನಲ್ಲಿ ಲಭ್ಯವಿದ್ದು, ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವಂತೆ ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಇಲಾಖಾ ವೆಬ್‌ಸೈಟ್: https://dom.karnataka.gov.in ಅಥವಾ https://dom.karnataka.gov.in/new-page/online%20Application/en ಈ ಲಿಂಕ್‌ನಲ್ಲಿ ಪ್ರವೇಶ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಡಾ.ರಾಜ್ ಕುಮಾರ್ ಜನ್ಮ ದಿನಾಚರಣೆ ಏ.24 ರಂದು

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ನಟಸಾರ್ವಭೌಮ ಡಾ.ರಾಜ್‌ಕುಮಾರ್‌ರವರ 97ನೇ ಜನ್ಮ ದಿನಾಚರಣೆ ಸಮಾರಂಭ ಇದೇ ಏಪ್ರಿಲ್ 24ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಅಧ್ಯಕ್ಷ ಜಿ.ಎಸ್. ಮಂಜುನಾಥ, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ ಸೇರಿದಂತೆ ವಿವಿಧ ಗಣ್ಯರು, ಉನ್ನತ ಅಧಿಕಾರಿಗಳು ಪಾಲ್ಗೊಳ್ಳುವರು. ಕಾರ್ಯಕ್ರಮಕ್ಕೆ ಡಾ. ರಾಜ್‌ಕುಮಾರ್ ಅಭಿಮಾನಿಗಳು ಆಗಮಿಸಿ, ಸಮಾರಂಭ ಯಶಸ್ವಿಗೊಳಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

### ವೃತ್ತಿಪರ ತರಬೇತಿಗೆ ಅರ್ಜಿ

» ವಿಜಯನಗರ

2024-25ನೇ ಸಾಲಿನಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ (ಐಐಎಸ್ಸಿ), ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಐಐಟಿ) ಮತ್ತು ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎನ್‌ಐಟಿ) ಸಂಸ್ಥೆಗಳ ಮೂಲಕ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ (ಅರ್ಟಿಫಿಸಿಯಲ್ ಇಂಟೆಲಿಜೆನ್ಸಿ ಮತ್ತು ಮೆಷಿನ್ ಲರ್ನಿಂಗ್) ಕೋರ್ಸ್‌ಗಳಲ್ಲಿ ಭಾಗವಹಿಸುವ 200 ಇಂಜಿನಿಯರಿಂಗ್ ಎಸ್ಸಿ ಪದವಿಧರರಿಗೆ ರೂ.15000 ಶಿಷ್ಯವೇತನ ಹಾಗೂ ತರಬೇತಿ ನೀಡಲಾಗುವುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೊಹಿದ್ದೀನ್ ತಿಳಿಸಿದ್ದಾರೆ.

ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ವಿಜಯನಗರ ಜಿಲ್ಲೆಯ ಮೂಲನಿವಾಸಿ ಮತ್ತು ಅಲೆಮಾರಿ, ಅರೆಅಲೆಮಾರಿ ಮತ್ತು ಸೂಕ್ಷ್ಮ, ಅತಿ ಸೂಕ್ಷ್ಮ ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ಅರ್ಟಿಫಿಸಿಯಲ್ ಇಂಟೆಲಿಜೆನ್ಸ್ ಮತ್ತು ಮೆಷಿನ್ ಲರ್ನಿಂಗ್ ತರಬೇತಿ ನೀಡಲಾಗುವುದು. ಇದೇ ಏಪ್ರಿಲ್ 25 ರೊಳಗಾಗಿ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ.

ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದಿರುವ ವಿಶ್ವವಿದ್ಯಾಲಯಗಳಲ್ಲಿ ಬಿಇ, ಬಿಟೆಕ್ ಕೋರ್ಸ್ ಗಳನ್ನು ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಶಿಷ್ಯವೇತನಕ್ಕೆ ಅರ್ಹರಾಗಿರುತ್ತಾರೆ. ಆಭ್ಯರ್ಥಿಯು ಬಿಇ, ಬಿಟೆಕ್ ಕೋರ್ಸ್‌ಗಳಲ್ಲಿ ಕನಿಷ್ಠ ಶೇ.55 ರಷ್ಟು ಕಡ್ಡಾಯವಾಗಿ ಅಂಕ ಗಳಿಸಿರಬೇಕು. ಕೋರ್ಸ್ ನ ಅವಧಿಯು ಗರಿಷ್ಠ ಎರಡು ವಾರಗಳಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಆಯಾ ತಾಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಶ್ರಯ ಯೋಜನೆ ಜಮೀನು ಮಂಜೂರಾತಿ: ವಾರದೊಳಗೆ ಪ್ರಸ್ತಾವನೆ ಸಲ್ಲಿಸಿ; ಜಿಲ್ಲಾಧಿಕಾರಿ

» ಚಿತ್ರದುರ್ಗ

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪ್ರದೇಶದಲ್ಲಿ ಆಶ್ರಯ ಯೋಜನೆಯಡಿ ನಿವೇಶನ ರಹಿತರಿಗೆ ನಿವೇಶನ ಒದಗಿಸುವ ನಿಟ್ಟಿನಲ್ಲಿ ತಮ್ಮ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನು ಗುರುತಿಸಿ, ಜಮೀನು ಮಂಜೂರಾತಿಗಾಗಿ ವಾರದೊಳಗೆ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಚಳ್ಳಕೆರೆ ತಾಲ್ಲೂಕು ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಆಶ್ರಯ ಯೋಜನೆ, ಸ್ಮಶಾನ, ಅಂಗನವಾಡಿ, ಶಾಲೆಗಳಿಗೆ ಜಮೀನು ಮಂಜೂರಾತಿ ಕುರಿತಂತೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ನಿವೇಶನ ರಹಿತ ಫಲಾನುಭವಿಗಳಿಗೆ ಅಗತ್ಯವಿರುವ ನಿವೇಶನ ಹಂಚಿಕೆ ಜೊತೆಗೆ ಸ್ಮಶಾನ, ಅಂಗನವಾಡಿ ಹಾಗೂ ಶಾಲೆಗಳಿಗೂ ಸಹ ಜಮೀನು



ಮೀಸಲಿರಿಸಿ ಪ್ರಸ್ತಾವನೆ ಸಲ್ಲಿಸಬೇಕು. ಒಂದು ವೇಳೆ ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಖಾಸಗಿ ಜಮೀನು ಖರೀದಿಗೆ ಸಂಬಂಧಪಟ್ಟ ತಹಶೀಲ್ದಾರ್ ಹಾಗೂ ತಾ.ಪಂ ಇಒ ಗೆ ಗ್ರಾಮವಾರು ಪ್ರಸ್ತಾವನೆ ಸಲ್ಲಿಸಬೇಕು. ಗ್ರಾಮಸಭೆ ಮೂಲಕ ಅರ್ಹ ನಿವೇಶನ ರಹಿತ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ನಿವೇಶನ ರಹಿತ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಬಹಳ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ನಿವೇಶನ ರಹಿತರ ಫಲಾನುಭವಿಗಳಿಗೆ ಅನುಗುಣವಾಗಿ ಸರ್ಕಾರಿ ಜಮೀನು ಲಭ್ಯವಿದ್ದಲ್ಲಿ ತಹಶೀಲ್ದಾರ್ ಅವರು ಜಮೀನು ಮಂಜೂರಾತಿ ಆದೇಶ ಪ್ರತಿ, ಸ್ಕೆಚ್ ಹಾಗೂ ಪಹಣಿಯನ್ನು ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡಬೇಕು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ದಾಖಲೆಗಳೊಂದಿಗೆ ರಾಜೀವ್ ಗಾಂಧಿ ವಸತಿ ಯೋಜನೆಯ ಪೋರ್ಟಲ್‌ನಲ್ಲಿ ಎಂಟ್ರಿ ಮಾಡಿ, ಹಕ್ಕುಪತ್ರ ವಿತರಣೆಗೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸರ್ಕಾರಿ ಜಮೀನು ಒತ್ತುವರಿ ತಡೆಯುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕಾಲಕಾಲಕ್ಕೆ ಒತ್ತುವರಿ ತೆರವು ಸಮಿತಿ ಸಭೆಗಳನ್ನು ನಡೆಸಬೇಕು. ಒಂದು ವೇಳೆ ಸರ್ಕಾರಿ ಜಮೀನು ಒತ್ತುವರಿಯಾಗಿದ್ದರೆ ತಕ್ಷಣವೇ ಒತ್ತುವರಿ ತೆರವುಗೊಳಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಜಿಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಚಳ್ಳಕೆರೆ ತಹಶೀಲ್ದಾರ್ ರೆಹಾನ್ ಪಾಷಾ, ಚಿತ್ರದುರ್ಗ ತಹಶೀಲ್ದಾರ್ ಗೋವಿಂದರಾಜು, ಚಿತ್ರದುರ್ಗ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ್, ಸೇರಿದಂತೆ ಕಂದಾಯ ನಿರೀಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದ್ದರು.

## ರಾಷ್ಟ್ರೀಯ ಹವಾಮಾನ ವೈಪರಿತ್ಯ ಕಾರ್ಯಗಾರ; ಆಶಾ ಕಾರ್ಯಕರ್ತೆಯರು ಹೆಚ್ಚು ಜಾಗೃತಿ ವಹಿಸುವುದು ಅಗತ್ಯ

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ಅನಿರೀಕ್ಷಿತವಾಗಿ ವಾತಾವರಣ ಬದಲಾಗುತ್ತಿದೆ, ಒಮ್ಮೊಮ್ಮೆ ಹೆಚ್ಚು ಗಾಳಿ, ಮಳೆ, ಉಷ್ಣತೆ ಹೆಚ್ಚಿ ವ್ಯಕ್ತಿಯ ಆರೋಗ್ಯದಲ್ಲಿ ಏರುಪೇರಾಗುವ ಸಂದರ್ಭವಿದೆ.

ಹವಾಮಾನ ವೈಪರಿತ್ಯದಿಂದ ಮಾನವನ ಆರೋಗ್ಯದ ಮೇಲೆ ಪ್ರತಿಕೂಲಪರಿಣಾಮ ಉಂಟಾಗುತ್ತಿದೆ ಅದರಿಂದ ಜಾಗೃತಿಗೊಳಿಸುವ ಕಾರ್ಯವನ್ನು ಆರೋಗ್ಯ ಇಲಾಖೆ ಹಮ್ಮಿಕೊಂಡಿದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ ತಿಳಿಸಿದರು.

ಅವರು, ಬುಧವಾರ ನಗರದ ಸಾರ್ವಜನಿಕ ಆಸ್ಪತ್ರೆ ಸಭಾಂಗಣದಲ್ಲಿ ಹಿರಿಯೂರು, ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕಿನ ಆರೋಗ್ಯ ಕಾರ್ಯಕರ್ತರಿಗೆ ರಾಷ್ಟ್ರೀಯ ಹವಾಮಾನ ವೈಪರಿತ್ಯ ಹಾಗೂ ಮಾನವನ ಮೇಲೆ ಆಗುವ ಪರಿಣಾಮಗಳ ಬಗ್ಗೆ ಏರ್ಪಡಿಸಿದ್ದ ಒಂದು ದಿನದ ಜಾಗೃತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಹಿರಿಯೂರಿ, ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕಿನ ಆಶಾ ಕಾರ್ಯಕರ್ತೆರಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಗ್ರಾಮೀಣಾ ಭಾಗದಲ್ಲಿ ಸದಾಜನರೊಂದಿಗೆ ಬೆರೆಯುವ ಆಶಾಕಾರ್ಯಕರ್ತೆಯರಿಗೆ ರೋಗಗಳ ನಿಯಂತ್ರಿಸುವ ಕುರಿತು ಹಲವಾರು ಮಾಹಿತಿ ಅವರಲ್ಲಿರುತ್ತವೆ. ಹವಾಮಾನ ವೈಪರಿತ್ಯದಿಂದ ಒಮ್ಮೊಮ್ಮೆ ನಿರೀಕ್ಷೆಗೂ ಮೀರಿದ ಹೆಚ್ಚಿದ ದುಷ್ಪರಿಣಾಮಗಳು ಉಂಟಾಗುತ್ತದೆ. ಆದ್ದರಿಂದ ಆಶಾ ಕಾರ್ಯಕರ್ತೆಯರು ಸಂಬಂಧಪಟ್ಟ ವೈದ್ಯರೊಂದಿಗೆ ಚರ್ಚಿಸಿ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಆರೋಗ್ಯ ಇಲಾಖೆ ಎಲ್ಲಾ ಜಾಗೃತಿ ಕಾರ್ಯಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸದಾಗ ಮಾತ್ರ ನಮ್ಮೆಲ್ಲರ ಶ್ರಮ ಸಾರ್ಥಕವಾಗಲಿದೆ ಎಂದರು.

ಜಿಲ್ಲಾ ಮೇಲ್ವಿಚಾಕರಾದ ಸುರೇಶ್‌ಬಾಬು, ಮಲ್ಲಿಕಾರ್ಜುನ್, ಲೋಕೇಶ್‌ನಾಯ್ಡು, ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಎಚ್.ರಾಜ್, ಅಮೃತರಾಜ್ ಮುಂತಾದವರು ಉಪಸ್ಥಿತರಿದ್ದರು.

## ಕಾನೂನು ಬಾಹಿರವಾಗಿ ತಂಬಾಕು ಪದಾರ್ಥಗಳನ್ನು ಮಾರಾಟ ಮಾಡಿದರೆ ಕಠಿಣ ಕಾನೂನು ಕ್ರಮ : ಪ್ರಭುದೇವ್.



» ಚಳ್ಳಕೆರೆ

ಕಾನೂನು ಬಾಹಿರವಾಗಿ ತಂಬಾಕು ಪದಾರ್ಥಗಳನ್ನು ಅನುಮತಿ ಇಲ್ಲದೆ ಮಾರಾಟ ಮಾಡುವುದು ಸರಿಯಲ್ಲ, ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಈಗಾಗಲೇ ಮಾಹಿತಿ ನೀಡಿದ್ದರೂ ಕೆಲವು ಅಂಗಡಿಗಳಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದು, ಕಠಿಣ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆಯನ್ನು ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಪ್ರಭುದೇವ್ ತಿಳಿಸಿದರು. ಅವರು, ಬುಧವಾರ ನಗರದ ಬೆಂಗಳೂರು ರಸ್ತೆಯ ವಿವಿಧ ಅಂಗಡಿಗಳಿಗೆ ಭೇಟಿ ನೀಡಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿ ಒಟ್ಟು 27 ಪ್ರಕರಣಗಳನ್ನು ದಾಖಲಿಸಿದ್ದಾರೆ. ಮುಂದಿನ ದಿನಗಳಲ್ಲಿ ನಿಯಮ ಮೀರಿದರೆ ಅಂಗಡಿ ಮಾಲೀಕರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಿದರು. ದಾಳಿಯಲ್ಲಿ ಆರೋಗ್ಯಾಧಿಕಾರಿಗಳಾದ ಸಿ.ಎಂ.ಅಮೃತ್‌ರಾಜ್, ಬಿ.ಎಚ್.ರಾಜು, ಜೆ.ಶಿವಪ್ರಕಾಶ್, ನಗರಸಭೆ ಆರೋಗ್ಯ ನಿರೀಕ್ಷಕ ರುದ್ರಮುನಿ, ಸಾಗರ್ ಮುಂತಾದವರು ಉಪಸ್ಥಿತರಿದ್ದರು.

## 25ರಂದು ನೇರ ಸಂದರ್ಶನ

**ತುಮಕೂರು:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ವೆಕ್ಸ್ ಫೋರ್ಡ್ ಸಂಸ್ಥೆಯ ಸಹಭಾಗಿತ್ವದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಏಪ್ರಿಲ್ 25ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ. ಬಿ.ಎಸ್ಸಿ, ಬಿ.ಕಾಂ., ಎಂ.ಬಿ.ಎ., ಬಿ.ಇ., ಡಿಪ್ಲೊಮಾ(ಸಿವಿಲ್), ಎಂ.ಫಾರ್ಮ, ಬಿ.ಫಾರ್ಮ ಹಾಗೂ ಡಿ.ಫಾರ್ಮ ಪಾಸಾದ ಅಭ್ಯರ್ಥಿಗಳು ಬಯೋಡೇಟಾದೊಂದಿಗೆ ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816-2278488, ಮೊ.ಸಂ. 9071021143, 9513136642ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ವಾರ್ತಾ ಇಲಾಖೆಯಿಂದ ಡಿಜಿಟಲ್ ಜಾಹೀರಾತಿಗೆ ಮಾಧ್ಯಮ, ಏಜೆನ್ಸಿಗಳ ನೊಂದಣಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಸರ್ಕಾರದ ನೀತಿ ಮತ್ತು ಯೋಜನೆಗಳನ್ನು ಅಂತರ್ಜಾಲ ಬಳಸುವ ಜನರಿಗೆ ಡಿಜಿಟಲ್ ಜಾಹೀರಾತುಗಳ ಮೂಲಕ ತಲುಪಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ 2024 ಅನ್ನು ಜಾರಿಗೆ ತಂದಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರವು ಡಿಜಿಟಲ್ ಜಾಹೀರಾತಿಗಾಗಿ ಡಿಜಿಟಲ್ ಜಾಹೀರಾತು ಏಜೆನ್ಸಿ ಮತ್ತು ಡಿಜಿಟಲ್ ಮಾಧ್ಯಮಗಳನ್ನು ಎಂಪ್ಯಾನಲ್‌ಮೆಂಟ್ ಮಾಡಿಕೊಳ್ಳುತ್ತಿದೆ. ದೇಶದಲ್ಲಿಯೇ ಮೊದಲ ಬಾರಿಗೆ ಡಿಜಿಟಲ್ ಏಜೆನ್ಸಿ ಮತ್ತು ಮಾಧ್ಯಮಗಳನ್ನು ನೊಂದಾಯಿಸಿಕೊಳ್ಳಲಾಗುತ್ತಿದೆ ಎಂದು ಮಾನ್ಯ ಮುಖ್ಯಮಂತ್ರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲವು ವರ್ಷಗಳಿಂದ ಮಾಧ್ಯಮದ ವ್ಯಾಪ್ತಿ ಮತ್ತು ಸ್ವರೂಪ ಬದಲಾಗಿದೆ. ಅಂತರ್ಜಾಲ, ಖಾಸಗಿ ಕಂಪ್ಯೂಟರ್, ಸ್ಮಾರ್ಟ್ ಟಿವಿ ಹಾಗೂ ಸ್ಮಾರ್ಟ್ ಫೋನ್, ಸಾಮಾಜಿಕ ಜಾಲತಾಣಗಳ ಬಳಕೆ ಹೆಚ್ಚಾಗಿದೆ. ಸಾಂಪ್ರದಾಯಿಕ ಜಾಹೀರಾತುಗಳಿಗಿಂತ ಡಿಜಿಟಲ್ ಜಾಹೀರಾತು ಹೆಚ್ಚು ಪ್ರಭಾವಶಾಲಿಯಾಗಿದೆ. ಜೊತೆಗೆ, ಹೆಚ್ಚು ವ್ಯಾಪ್ತಿ ಮತ್ತು ನಿರ್ದಿಷ್ಟ ಜನರನ್ನು ತಲುಪುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಕಾರ್ಯಕ್ರಮಗಳು ಮತ್ತು ನೀತಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಮಾಹಿತಿ, ಶಿಕ್ಷಣ

### ಡಿಜಿಟಲ್ ಮಾಧ್ಯಮ ಘಟಕಕ್ಕೆ ಅರ್ಹತೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಡಿಜಿಟಲ್ ಜಾಹೀರಾತು ನೀಡಲು ಎಂಪ್ಯಾನೆಲ್‌ಮೆಂಟ್‌ಗಾಗಿ ಡಿಜಿಟಲ್ ಮಾಧ್ಯಮ ಘಟಕವು ಭಾರತದ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೋಂದಣಿಯಾದ ಕಾನೂನುಬದ್ಧ ಸಂಘಟಿತ ಘಟಕವಾಗಿರಬೇಕು. ಕನಿಷ್ಠ ಒಂದು ವರ್ಷ ಕಾಲ ಯಾವುದೇ ಸಮಯದ ಅಂತರವಿಲ್ಲದೆ ನಿರಂತರವಾಗಿ ಕಂಟೆಂಟ್ ಪ್ರಕಟಿಸಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು. ರಾಜ್ಯ ಅಥವಾ ಕೇಂದ್ರ ಸರ್ಕಾರ ಅಥವಾ ಅದರ ಏಜೆನ್ಸಿಗಳ ಎಲ್ಲ ಶಾಸನಬದ್ಧ ಅವಶ್ಯಕತೆಗಳನ್ನು ಅನುಸರಿಸಲು ವಿಫಲವಾದರೆ ಎಂಪ್ಯಾನೆಲ್ಮೆಂಟ್ ರದ್ದುಗೊಳಿಸಲಾಗುತ್ತದೆ. ಭಾರತದ ಕಾನೂನನ್ನು ಉಲ್ಲಂಘಿಸುವ ಪದ, ದೃಶ್ಯಗಳು, ಆಡಿಯೋ ಅಥವಾ ಅಂತಹ ಯಾವುದೇ ವಿಷಯವನ್ನು ಪ್ರಕಟಿಸಿರಬಾರದು ಎಂಬ ಷರತ್ತುಗಳನ್ನು ವಿಧಿಸಲಾಗಿದೆ. ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಡಿಜಿಟಲ್ ಮಾಧ್ಯಮ ಘಟಕಗಳು ಮತ್ತು ಡಿಜಿಟಲ್ ಜಾಹೀರಾತು ಏಜೆನ್ಸಿಗಳು sevasindhu.karnataka.gov.inಗೆ ಭೇಟಿ ನೀಡಿ, ನಿಗದಿಪಡಿಸಿರುವ ದಾಖಲಾತಿಗಳೊಂದಿಗೆ ಶುಲ್ಕ ಪಾವತಿಸಿ, ಮೇ 15 ರ ಒಳಗೆ ಅರ್ಜಿ ಸಲ್ಲಿಸಲು ಕೋರಿದೆ.

ಮತ್ತು ಸಂವಹನ (ಐಇಸಿ) ಮಾದರಿಯಲ್ಲಿ ಡಿಜಿಟಲ್ ಜಾಹೀರಾತು ನೀಡಲು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿಯನ್ನು ಸರ್ಕಾರ ಹೊರತಂದಿದೆ ಎಂದು ಮುಖ್ಯಮಂತ್ರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸ ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ಎಲ್ಲಾ ಇಲಾಖೆಗಳು, ನಿಗಮಗಳು, ಪ್ರಾಧಿಕಾರಗಳು, ಮಂಡಳಿಗಳು, ಸ್ಥಳೀಯಾಡಳಿತಗಳು, ಪುರಸಭೆಗಳು, ನಗರ ಪಾಲಿಕೆಗಳು ಮೊದಲಾದವುಗಳಲ್ಲಿ ಡಿಜಿಟಲ್ ಜಾಹೀರಾತುಗಳನ್ನು ಕಡ್ಡಾಯವಾಗಿ ಈ ಮಾರ್ಗಸೂಚಿಗೆ ಅನುಸಾರವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಬಿಡುಗಡೆ / ಪೂರೈಸಬೇಕಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ವೀಡಿಯೊ ಸ್ಟ್ರೀಮಿಂಗ್ ಪ್ಲಾಟ್‌ಫಾರ್ಮ್‌ಗಳಾದ ಗೂಗಲ್ (ಯೂಟ್ಯೂಬ್), ಮೆಟಾ (ಫೇಸ್‌ಬುಕ್, ಇನ್‌ಸ್ಟಾಗ್ರಾಂ, ವಾಟ್ಸಾಪ್ ಬಿಸಿನೆಸ್, ವಾಟ್ಸಾಪ್ ಚಾನಲ್), ಸರ್ಚ್ ಇಂಜಿನ್‌ಗಳಾದ ಗೂಗಲ್, ಬಿಂಗ್, ಸಾಮಾಜಿಕ ಜಾಲತಾಣಗಳಾದ ಎಕ್ಸ್ (ಈ ಹಿಂದೆ ಟ್ವಿಟರ್), ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಲಿಂಕ್‌ಡ್‌ಇನ್, ವಾಟ್ಸಾಪ್, ಸ್ನಾಪ್‌ಚಾಟ್, ಟೆಲಿಗ್ರಾಂ, ಒಟಿಟಿ ಪ್ಲಾಟ್‌ಫಾರ್ಮ್‌ಗಳಾದ ನೆಟ್‌ಫ್ಲಿಕ್ಸ್, ಅಮೇಜಾನ್ ಪ್ರೈಮ್, ಡಿಸ್ನಿ ಹಾಟ್‌ಸ್ಟಾರ್ ಸೋನಿಲೈವ್, ಜಿಯೋ ಸಿನಿಮಾ, ಜೀ 5, ವೂಟ್, ಸನ್ ನೆಕ್ಸ್ಟ್ ಮತ್ತು ಟಾಕೀಸ್, ಫಿನ್‌ಟೆಕ್ ಪ್ಲಾಟ್‌ಫಾರ್ಮ್‌ಗಳಾದ ಪೇಟಿಎಂ, ಫೋನ್‌ಪೇ ಮತ್ತು ಜಿಪೇ ಸೇರಿದಂತೆ ಇನ್ನಿತರ ಡಿಜಿಟಲ್ ವೇದಿಕೆಗಳಡಿ ಜಾಹೀರಾತು ಅರ್ಹ ಏಜೆನ್ಸಿಗಳ ಮೂಲಕ ನೀಡಲು ಅವುಗಳನ್ನು ಎಂಪ್ಯಾನಲ್ ಮಾಡಿಕೊಳ್ಳಲು ವಾರ್ತಾ ಇಲಾಖೆಯು ಉದ್ದೇಶಿಸಿದೆ.

ಹಾಗೆಯೇ, ಅಪ್ಲಿಕೇಶನ್ ಡೌನ್‌ಲೋಡ್ ಪ್ಲಾಟ್‌ಫಾರ್ಮ್ ಅಡಿಯಲ್ಲಿ ಬರುವ ವೀಡಿಯೊ, ಡಿಸ್‌ಪ್ಲೇ ಮತ್ತು ಸರ್ಚ್ ಸೇರಿದಂತೆ ವಿವಿಧ ವೇದಿಕೆಗಳಡಿ ಜಾಹೀರಾತು ನೀಡಿಕೆ, ಗೂಗಲ್ ಪ್ಲೇ ಸ್ಟೋರ್ ಅಥವಾ ಆಪಲ್ ಆಪ್ ಸ್ಟೋರ್‌ನಲ್ಲಿ ಕನಿಷ್ಠ 1 ಲಕ್ಷ ಡೌನ್‌ಲೋಡ್ ಹೊಂದಿರುವ ಯಾವುದೇ ಆಪ್ ಮತ್ತು ಸುದ್ದಿಗಳನ್ನು ಪ್ರಸಾರ ಮಾಡುವ ಯಾವುದೇ ಡಿಜಿಟಲ್ ಘಟಕ-ವೆಬ್ ಅಪ್ಲಿಕೇಶನ್ ಅಥವಾ ಮೊಬೈಲ್ ಅಪ್ಲಿಕೇಶನ್ ಸೇರಿದಂತೆ ವಿವಿಧ ಮೂಲಗಳಿಂದ ಸುದ್ದಿಗಳನ್ನು ಸಂಗ್ರಹಿಸಿ ಜನರಿಗೆ ನೀಡುವ ವೇದಿಕೆಗಳು. ಇನ್‌ಶಾರ್ಟ್ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಫಾಲೋವರ್‌ಗಳನ್ನು ಹೊಂದಿರುವ ಇನ್‌ಫ್ಲ್ಯುಯೆನ್ಸರ್‌ಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ನೋಂದಾಯಿಸಿಕೊಂಡು ಜಾಹೀರಾತು ಪಡೆಯಲು ಅರ್ಹತೆ ಹೊಂದುತ್ತವೆ.

ಡಿಜಿಟಲ್ ಜಾಹೀರಾತಿಗಾಗಿ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಸಹಯೋಗ ಹೊಂದಲು ಬಯಸುವ ಏಜೆನ್ಸಿಗಳು ಭಾರತ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೋಂದಣಿಯಾದ ಪ್ರೈವೇಟ್ ಲಿಮಿಟೆಡ್ ಕಂಪನಿ, ಪಬ್ಲಿಕ್ ಲಿಮಿಟೆಡ್ ಕಂಪನಿ, ಪಾಲುದಾರಿಕೆ, ಲಿಮಿಟೆಡ್ ಲಯಬಿಲಿಟಿ ಪಾಲುದಾರಿಕೆ ಹೊಂದಿರಬೇಕು. ಎಂಪ್ಯಾನೆಲಿಂಗ್ ಸಮಯದಲ್ಲಿ ಕನಿಷ್ಠ ಎರಡು ವರ್ಷವಾಗಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು. ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರಬೇಕು ಅಥವಾ ಕರ್ನಾಟಕದಲ್ಲಿ ಪೂರ್ಣ ಪ್ರಮಾಣದ ಕಚೇರಿ ಇರಬೇಕು. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಪ್ರಾವೀಣ್ಯತೆ ಇರಬೇಕು. ಡಿಜಿಟಲ್ ಜಾಹೀರಾತು ಮತ್ತು ಸಾಮಾಜಿಕ ಜಾಲತಾಣದ ಬಗ್ಗೆ ಆಳವಾದ ಜ್ಞಾನವಿರಬೇಕು. ಸರ್ಕಾರಗಳಿಗೆ ಪ್ಲಾಟ್‌ಫಾರ್ಮ್‌ಗಳಲ್ಲಿ ಡಿಜಿಟಲ್ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾ ಜೊತೆಗೆ ಮಾನ್ಯವಾದ ಒಪ್ಪಂದ/ಒಡಂಬಡಿಕೆ ಹೊಂದಿರಬೇಕು. ತಮ್ಮ ಪ್ಲಾಟ್‌ಫಾರ್ಮ್‌ಗಳಲ್ಲಿ ಸರ್ಕಾರದ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾದಿಂದ ಅನುಮತಿ ಪಡೆದುಕೊಂಡಿರಬೇಕು ಎಂದು ಷರತ್ತುಗಳನ್ನು ನಿಗದಿ ಪಡಿಸಿದೆ.

## ಫಾಸ್ಟ್ ನ್ಯೂಸ್

### ಜಮ್ಮು-ಕಾಶ್ಮೀರ ಪ್ರವಾಸಕ್ಕೆ ತೆರಳಿರುವವರ ಮಾಹಿತಿಗಾಗಿ ಸಹಾಯವಾಣಿ ಆರಂಭ

» ಚಿತ್ರದುರ್ಗ

ಕಾಶ್ಮೀರದ ಪಹಲ್‌ಗಾಮದಲ್ಲಿ ಉಗ್ರರ ದಾಳಿಯಿಂದ ಕನ್ನಡಿಗರಿಬ್ಬರು ಸಾವಿಗೀಡಾಗಿರುವುದು ವಿಷಾದನೀಯ ಸಂಗತಿ. ಆದ್ದರಿಂದ ಜಮ್ಮು-ಕಾಶ್ಮೀರದಪ್ರವಾಸಕ್ಕೆತೆರಳಿರುವಕನ್ನಡಿಗರನ್ನುರಾಜ್ಯಕ್ಕೆ ಮರಳಿ ತರಲು ರಾಜ್ಯ ಸರ್ಕಾರವು ಪ್ರಯತ್ನಿಸುತ್ತಿದೆ. ಕರ್ನಾಟಕದಲ್ಲಿ ಪ್ರವಾಸ ನಿರ್ವಹಿಸುತ್ತಿರುವ ಪ್ರವಾಸಿ ಕಾರ್ಯಾಚರಣೆದಾರರು (ಖಿಂಣಡಿ ಔಠಿಜಡಿಚಿಣಂಡಿ & ಖಿಡಿಚಿತಜಟ ಂರಜಟಿಣ) ತಮ್ಮ ಮೂಲಕ ಜಮ್ಮು-ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರಯಾಣಿಕರ ವಿವರಗಳನ್ನು ಈ ಕೆಳಕಂಡ ಸಹಾಯವಾಣಿಗೆ ನೀಡಬೇಕೆಂದು ಕೋರಿದೆ. ಜಮ್ಮು-ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರವಾಸಿಗರ ಸಂಬಂಧಿಕರು ಅಥವಾ ಪರಿಚಯಸ್ಥರು ಪ್ರವಾಸಕ್ಕೆ ತೆರಳಿರುವವರ ವಿವರಗಳನ್ನು 080-43344334, 080-43344335, 080-43344336, 080-43344342 ಈ ಸಹಾಯವಾಣಿಗೆ ಮಾಹಿತಿ ನೀಡಬೇಕು ಎಂದು ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ಕೋರಿದ್ದಾರೆ.

### ಪಹಲ್ಗಾಮ್ ದಾಳಿ ಭಯೋತ್ಪಾದನೆ ಮರುಸ್ಥಾಪಿಸುವ ಯತ್ನ: ಬಸವರಾಜ ಬೊಮ್ಮಾಯಿ

» ಬೆಂಗಳೂರು

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕರ ಮೇಲೆ ದಾಳಿ ಮಾಡಿರುವುದು ಇದೊಂದು ಹೇಯ ಕೃತ್ಯ ಮತ್ತು ಇದು ಭಯೋತ್ಪಾದನೆ ಮರುಸ್ಥಾಪಿಸುವ ಪ್ರಯತ್ನ ಇದನ್ನು ಪ್ರತಿಯೊಬ್ಬ ನಾಗರಿಕರು ಖಂಡಿಸುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.ಈ ಕುರಿತು ಎಕ್ಸ್ ಮಾಡಿರುವ ಅವರು, ಧರ್ಮದ ಹೆಸರು ಕೇಳಿ ಗುಂಡು ಹಾರಿಸಿರುವುದು ಭಾರತದ ವಿರೋಧಿ ಶಕ್ತಿಗಳ ಕೈವಾಡ ಇರುವುದು ಬಹಳ ಸ್ಪಷ್ಟ. ಇದನ್ನು ಕೂಡಲೇ ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಮಟ್ಟ ಹಾಕಬೇಕು. ಮತ್ತು ಜಮ್ಮು ಕಾಶ್ಮೀರ ಕಣಿವೆಯಲ್ಲಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆ ತರಲು ರಾಜ್ಯ ಸರ್ಕಾರ ಎಲ್ಲ ವ್ಯವಸ್ಥೆಯನ್ನು ಮಾಡಬೇಕು. ಘಟನೆಯಲ್ಲಿ ಮೃತರಾದವರ ಕುಟುಂಬದವರಿಗೆ ಅವರ ಅಗಲಿಕೆಯ ದುಖವನ್ನು ಭರಿಸುವ ಭಗವಂತ ಶಕ್ತಿ ಕೊಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಿಳಿಸಿದ್ದಾರೆ.

### 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» ಚಿತ್ರದುರ್ಗ

2020-26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಸಲ್ಲಿಸಬಹುದಾಗಿರುತ್ತದೆ. ಮೇ 10 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಬಾಲಕಿ ಕಾಣೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕು ತೇಕಲವಟ್ಟಿ ಗೊಲ್ಲರಹಟ್ಟಿ ಗ್ರಾಮದ ನಿವಾಸಿ ಶೈಲಜಾ ಎಂಬ ಬಾಲಕಿ 2025ರ ಮಾರ್ಚ್ 19ರಂದು ಕಾಣೆಯಾಗಿರುವ ಪ್ರಕರಣ ಹೊಳಲ್ಕೆರೆ ತಾಲ್ಲೂಕು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಬಾಲಕಿಯ ಚಹರೆ ಇಂತಿದೆ. ಶೈಲಜಾ ತಂದೆ ಶಿವಪ್ಪ, 17 ವರ್ಷ, 5 ಅಡಿ ಎತ್ತರವಿದ್ದು, ಎಣ್ಣೆಗೆಂಪು ಬಣ್ಣ ಹೊಂದಿದ್ದಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಹಳದಿ ಚುಕ್ಕಿಗಳಿರುವ ಚೂಡಿದಾರ ಧರಿಸುತ್ತಾರೆ. ಈ ಮೇಲ್ಕಂಡ ಚಹರೆವುಳ್ಳ ಬಾಲಕಿ ಪತ್ತೆಯಾದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಪೊಲೀಸ್ ಉಪನಿರೀಕ್ಷಕರು ಮನವಿ ಮಾಡಿದ್ದಾರೆ.

### 5 ರಂದು ಸಾರಿಗೆ ಅದಾಲತ್ ಕಾರ್ಯಕ್ರಮ

» ವಿಜಯನಗರ

ಹೊಸಪೇಟೆ ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಮೇ.5 ರಂದು, ಮಧ್ಯಾಹ್ನ 12.00 ಗಂಟೆಗೆ, ಹೊಸಪೇಟೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಿಂದ ಸೈಬರ್ ಅಪರಾಧಗಳ ತಡೆಗೆ ಸೂಕ್ತ ಕ್ರಮ

# ಸಹಾಯವಾಣಿ-1930, ವೆಬ್ ಬಾಟ್ ಉನ್ನತೀಕರಣ

» ಚಿತ್ರದುರ್ಗ

ಪ್ರಸ್ತುತ ದೇಶದಲ್ಲಿ ಹೆಚ್ಚುತ್ತಿರುವ ಆನ್‌ಲೈನ್ ಹಣಕಾಸು ವಂಚನೆಗಳನ್ನು ತಡೆಯಲು ರಾಜ್ಯದಲ್ಲಿ ಸೈಬರ್ ಅಪರಾಧ ಸಹಾಯವಾಣಿ-1930 ಜೊತೆಗೆ ವೆಬ್ ಬಾಟ್ ಉನ್ನತೀಕರಣ ಮಾಡಲಾಗಿದೆ ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರಾದ ಅಲೋಕ್ ಮೋಹನ್ ತಿಳಿಸಿದರು.

ಬೆಂಗಳೂರು ನಗರದ ಮಹಾತ್ಮಗಾಂಧಿ ರಸ್ತೆಯಲ್ಲಿರುವ ಎಡಿಜಿಪಿ ಸಿಎಲ್&ಎಮ್ ಕಾರ್ನರ್ ಹೌಸ್ ಕಚೇರಿಯಲ್ಲಿ ಉನ್ನತೀಕರಿಸಲಾದ ಸೈಬರ್ ಅಪರಾಧ ಸಹಾಯವಾಣಿ-1930 ವೆಬ್ ಬಾಟ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿ 1930 ಸಹಾಯವಾಣಿಯಲ್ಲಿ ಸ್ವೀಕರಿಸಿದ ಕರೆಗಳ ಸಂಖ್ಯೆ 2022 ರಲ್ಲಿ 1.30 ಲಕ್ಷ ಇದ್ದು, ನಂತರ 2024 ರಲ್ಲಿ 8.26 ಲಕ್ಷಕ್ಕೆ ಮತ್ತು 2025 ರ ಮೊದಲ ತ್ರೈಮಾಸಿಕದಲ್ಲಿ (ಜನವರಿ-ಮಾರ್ಚ್) 4.34 ಲಕ್ಷಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಪ್ರಸ್ತುತ ರಾಜ್ಯದಲ್ಲಿ ಸಾರ್ವಜನಿಕರು ಪ್ರತಿನಿತ್ಯ ಆನ್‌ಲೈನ್ ಹಣಕಾಸು ವಂಚನೆಗಳಿಗೆ ಒಳಗಾಗುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ತಕ್ಷಣ ಸಾರ್ವಜನಿಕರು ದೂರು ದಾಖಲಿಸಲು ಅನುವಾಗುವಂತೆ ಸೈಬರ್ ಅಪರಾಧ ಸಹಾಯವಾಣಿ-1930 ಹಾಗೂ ವೆಬ್ ಬಾಟ್‌ನ್ನು ಉನ್ನತೀಕರಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ತುರ್ತು ಸ್ಪಂದನಾ ವ್ಯವಸ್ಥೆಯ (Emergency Response Support System)ಸಾರ್ವಜನಿಕ ಸುರಕ್ಷತಾ ಪ್ರತ್ಯುತ್ತರ ಕೇಂದ್ರವನ್ನು (Public Safety Answering Point) ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಸಂಪರ್ಕ, ಸಾರಿಗೆ ಮತ್ತು ಆಧುನೀಕರಣರವರ ಕಛೇರಿ ಆವರಣದಲ್ಲಿಸ್ಥಾಪಿಸಲಾಗಿದ್ದು, ಸದರಿ 1930 ಸಹಾಯವಾಣಿ ಕೇಂದ್ರದಲ್ಲಿ ಆನ್‌ಲೈನ್ ಹಣಕಾಸು ವಂಚನೆ ಅಪರಾಧಗಳಿಗೆ ಸಂಬಂಧಿಸಿದ ದೂರುಗಳನ್ನು National Cyber crime Reporting Portal (NCRP) ಮೂಲಕ ದಾಖಲಿಸಲಾಗುತ್ತಿದೆ.

ಈ ರೀತಿಯಲ್ಲಿ ದೂರುದಾರರ ಕರೆಗಳ ಸಂಖ್ಯೆಯು ಏರಿಕೆಯಾಗುತ್ತಿರುವುದರಿಂದ, ಹೆಚ್ಚು ಸಂಖ್ಯೆಯ ಕರೆಗಳು ಕಡಿತಗೊಂಡಿರುವುದು (ಅಚಿಟಟ ಆಡಿಂಠಿ) ಕಂಡುಬಂದಿರುತ್ತದೆ. ಇದರಲ್ಲಿ ಹೆಚ್ಚಿನ ಪ್ರಮಾಣದ ಕರೆಗಳು ತಮ್ಮ ದೂರಿನ ಸ್ಥಿತಿ ವಿಚಾರಣೆ (Status enquiry) ಮತ್ತು ಸೈಬರ್ ಅಪರಾಧದ ಕುಂದುಕೊರತೆಗಳಿಗೆ ಸಂಬಂಧಿಸಿದ ಕರೆಗಳಾಗಿದ್ದು, ಎಲ್ಲಾ ಕರೆ ಸ್ವೀಕರಿಸುವ ಸಿಬ್ಬಂದಿಗಳು ಕಾರ್ಯನಿರತರಾಗಿರುತ್ತಿದ್ದ ಕಾರಣ 1930-ಸಹಾಯವಾಣಿಗೆ ಹೊಸ ದೂರುಗಳನ್ನು ದಾಖಲಿಸುವವರು ಶೀಘ್ರವಾಗಿ ಸಂಪರ್ಕಿಸಲು ಸಾಧ್ಯವಾಗುತ್ತಿರಲಿಲ್ಲ. ಇದರಿಂದಾಗಿ ದೂರುದಾರರಿಗೆ 1930-ಸಹಾಯವಾಣಿಯ ಸಂಪರ್ಕ ಸಿಗದೆ ಗೋಲ್ಡನ್‌ಅವರ್‌ನಲ್ಲಿದೂರುದಾಖಲಿಸಲು ಕಷ್ಟಕರವಾಗುತ್ತಿತ್ತು. ಈ ದೂರುದಾರರಲ್ಲಿ ಹಿರಿಯ ನಾಗರೀಕರು ಸಹ ಕರೆ ಮಾಡುತ್ತಿದ್ದು, 1930 ಸಹಾಯವಾಣಿಗೆ ಕರೆ ಮಾಡಿದ ಸಮಯದಲ್ಲಿ ಸಂಪರ್ಕ ಸಿಗದೇ ಅಸಹಾಯಕರಾಗಿದ್ದರು. ಈ ಸಮಸ್ಯೆಯಿಂದ ಹಣಕಾಸು ವಂಚನೆಗೊಳಗಾದ ದೂರುದಾರರ ಹಣವನ್ನು ಗೋಲ್ಡನ್ ಅವರ್ ನಲ್ಲಿ ಸಂಬಂಧಿಸಿದ ಬ್ಯಾಂಕ್‌ಗಳಲ್ಲಿ ತಡೆಹಿಡಿಯುವ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿತ್ತು. ಇದರಿಂದಾಗಿ ಸದರಿ ಹಣ ವಂಚಕರ ಖಾತೆಗೆ ವರ್ಗಾವಣೆಯಾಗಲು ಸುಲಭವಾಗುತ್ತಿತ್ತು.

ಈ ಎಲ್ಲಾ ಸಮಸ್ಯೆಗಳನ್ನು ಮನಗಂಡ ಇಲಾಖೆಯು, ಸಮಸ್ಯೆಯನ್ನು ಪರಿಹರಿಸಲು ದೂರುದಾರರ ಕರೆಗಳನ್ನು ಹಣಕಾಸು ಸಂಬಂಧಿತ ದೂರುಗಳು, ಹಣಕಾಸೇತರ ಸಂಬಂಧಿತ ದೂರುಗಳು (ಉದಾ.: WhatsApp/Facebook ಖಾತೆಯ ಹ್ಯಾಕ್‌ಗಳು ಅಥವಾ Impersonation), ದೂರಿನ ಸ್ಥಿತಿ ವಿಚಾರಣೆಗಳು ಮತ್ತು ಸೈಬರ್ ಅಪರಾಧ ಸಂಬಂಧಿತ ಕುಂದುಕೊರತೆ ಕರೆಗಳಾಗಿ ಐವಿಆರ್ ವ್ಯವಸ್ಥೆಯ ಮೂಲಕ ವರ್ಗೀಕರಿಸಲಾಗಿದೆ. ಇದರಿಂದಾಗಿ ಹೊಸ ದೂರನ್ನು ಸಕಾಲದಲ್ಲಿ ದಾಖಲಿಸುವವರಿಗೆ ಆದ್ಯತೆ ನೀಡಲಾಗಿದೆ ಮತ್ತು Voice Guided WebBOT ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ದೂರುದಾರರು ವೆಬ್‌ಬಾಟ್ ಮೂಲಕ ಮಾಹಿತಿ ಸಲ್ಲಿಸಲು ಇಚ್ಛಿಸಿದ್ದಲ್ಲಿ ಎಸ್‌ಎಂಎಸ್ ಮೂಲಕ ವೆಬ್‌ಬಾಟ್ ಲಿಂಕ್ ಅನ್ನು ಕಳುಹಿಸಲಾಗುವುದು. ನಂತರ ಈ ಸಹಾಯವಾಣಿಯ ಸಿಬ್ಬಂದಿಯ ಮೂಲಕ ಸದರಿ ಮಾಹಿತಿಯನ್ನು ಎನ್.ಸಿ.ಆರ್.ಪಿ ಯಲ್ಲಿ ದಾಖಲಿಸಲಾಗುವುದು. ಇದು ಸಾರ್ವಜನಿಕರಿಗೆ 1930 ಸಹಾಯವಾಣಿಯಲ್ಲಿ ದೂರು ಸಲ್ಲಿಸಲು ಹಾಗೂ ಕಾಲ್ ಡ್ರಾಪ್‌ಗಳನ್ನು ಸಹ ತಡೆಯಲು ಸಹಾಯವಾಗುತ್ತದೆ. 1930 ಸಹಾಯವಾಣಿಯ ಎಲ್ಲಾ ಸಿಬ್ಬಂದಿಗಳು ಕಾರ್ಯನಿರತವಾಗಿದ್ದ ಸಮಯದಲ್ಲಿ ದೂರುದಾರರು ಸ್ವಯಿಚ್ಚೆಯಿಂದ ಕರೆ ಕಡಿತಗೊಳಿಸಿದ ಸಮಯದಲ್ಲೂ ಸಹ ಎಸ್‌ಎಂಎಸ್ ಮುಖಾಂತರ ಈ ವೆಬ್‌ಬಾಟ್ ಲಿಂಕ್ ಅನ್ನು ಸದರಿ ದೂರುದಾರರಿಗೆ ಕಳುಹಿಸಲಾಗುವುದು.



2022 ರಲ್ಲಿ 20,894 ದೂರುಗಳನ್ನು ಸೈಬರ್ ಕ್ರೈಂ ಸಹಾಯವಾಣಿ-1930 ಮೂಲಕ National Cyber Crime Reporting Portal (NCRP) ನಲ್ಲಿ ದಾಖಲಿಸಲಾಗಿದ್ದು, 2024 ರಲ್ಲಿ 97,929 ದೂರುಗಳನ್ನು ದಾಖಲಿಸಲಾಗಿತ್ತು. 2022ನೇ ಇಸವಿಯಲ್ಲಿ ವರದಿಯಾದ ಒಟ್ಟು ವಂಚನೆಯ ಮೊತ್ತವು ರೂ.113 ಕೋಟಿ ರೂಪಾಯಿಗಳಾಗಿದ್ದು, ನಂತರ 2024 ರಲ್ಲಿ ರೂ.2,396 ಕೋಟಿಗಳಿಗೆ ಏರಿಕೆಯಾಗಿರುತ್ತದೆ. ಈ ಸಂಬಂಧ ಸೈಬರ್ ಕ್ರೈಂ ಸಹಾಯವಾಣಿ-1930 ರ ಮೂಲಕ ಬ್ಯಾಂಕ್‌ಗಳಲ್ಲಿ ತಡೆಹಿಡಿಯಲಾದ ಮೊತ್ತವು 2022 ರಲ್ಲಿ 8 ಕೋಟಿಗಳಾಗಿದ್ದು, ನಂತರ 2024 ರಲ್ಲಿ ರೂ.226 ಕೋಟಿ ವಂಚನೆಯ ಹಣವನ್ನು ತಡೆಹಿಡಿಯಲಾಗಿದೆ. ಸದರಿ ಮೊತ್ತವು ವಂಚನೆಯ ಮೊತ್ತದ ಶೇಕಡಾ 9 ರಷ್ಟು ಆಗಿರುತ್ತದೆ. ಈ ಹೊಸ ವ್ಯವಸ್ಥೆಯ ಪರಿಣಾಮದಿಂದಾಗಿ 2025 ರ ಮೊದಲ ತ್ರೈಮಾಸಿಕದಲ್ಲಿ 38,000 ಪ್ರಕರಣಗಳನ್ನು ಸೈಬರ್ ಕ್ರೈಂ ಸಹಾಯವಾಣಿ-1930 ಮೂಲಕ ದಾಖಲಿಸಲಾಗಿರುತ್ತದೆ. ಪ್ರಸ್ತುತ ವರ್ಷದಲ್ಲಿ ಮಾರ್ಚ್ 2025ರ ಅಂತ್ಯಕ್ಕೆ ವಂಚನೆ ಹಣದ ಶೇಕಡಾ 16 ರಷ್ಟು ಮೊತ್ತವನ್ನು ಬ್ಯಾಂಕ್‌ಗಳಲ್ಲಿಯೇ ತಡೆಯುವಲ್ಲಿ ಶ್ರಮವಹಿಸಿರುತ್ತೇವೆ ಎಂದು ಹೇಳಿದರು.

**ವೆಬ್‌ಬಾಟ್ ವ್ಯವಸ್ಥೆ ಜೊತೆಗೆ ಹೊಸ ಸೌಲಭ್ಯಗಳ ವಿವರ:** 1930 ಸಹಾಯವಾಣಿಯಲ್ಲಿ ಈ ಹಿಂದಿನ ದೂರವಾಣಿ ಮೂಲಸೌಕರ್ಯವನ್ನು ಬದಲಾಯಿಸಿ SIP ಲೈನ್‌ಗಳಿಗೆ ಉನ್ನತೀಕರಿಸಲಾಗಿದೆ. ಇದು ಹೆಚ್ಚುತ್ತಿರುವ ದೂರು ಕರೆಗಳ ಪ್ರಮಾಣವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ. ಭಾಷಾ ಆಯ್ಕೆ IVR (Interactive Voice Response) ವ್ಯವಸ್ಥೆಯನ್ನು ಪರಿಚಯಿಸಲಾಗಿದ್ದು, ಈ ವ್ಯವಸ್ಥೆಯು ವಂಚನೆಗೊಳಗಾದ ದೂರುದಾರರ ಸಂವಹನಕ್ಕಾಗಿ ಕನ್ನಡ, ಇಂಗ್ಲೀಷ್ ಅಥವಾ ಹಿಂದಿ ಭಾಷೆಯನ್ನು ಆಯ್ಕೆ ಮಾಡಲು ಅನುವು ಮಾಡಿಕೊಡುತ್ತದೆ. ವಂಚನೆಗೊಳಗಾದ ದೂರುದಾರರು 1930 ಸಹಾಯವಾಣಿಗೆ ಕರೆ ಮಾಡಿದಾಗ, ಕರೆ ಸ್ವೀಕರಿಸುವ ಎಲ್ಲಾ ಸಿಬ್ಬಂದಿಗಳು ಕಾರ್ಯನಿರತರಾಗಿದ್ದರೆ, ಈ ಸಮಯದಲ್ಲಿ ಐವಿಆರ್ ಮೂಲಕ ದೂರುದಾರರ Queue Positionಬಗ್ಗೆ ಮಾಹಿತಿ ಒದಗಿಸಲಾಗುತ್ತದೆ. ಹಣಕಾಸೇತರ ಸಂಬಂಧಿತ ದೂರುಗಳಲ್ಲಿ (ಉದಾ.: WhatsApp/Facebook ಖಾತೆಯ ಹ್ಯಾಕ್‌ಗಳು ಅಥವಾ Impersonation) ಸಮಸ್ಯೆಯನ್ನು ಬಗೆಹರಿಸುವ ಬಗೆಗಿನ ಮಾಹಿತಿಯ ಲಿಂಕ್ ಅನ್ನು ಎಸ್‌ಎಂಎಸ್ ಮುಖಾಂತರ ದೂರುದಾರರಿಗೆ ನೀಡಲಾಗುವುದು. ವಂಚನೆಗೊಳಗಾದವರು ಮತ್ತು ವಂಚಕರ ಬಗೆಗಿನ ಮಾಹಿತಿಯನ್ನು ಸಹ ಸಂಗ್ರಹಿಸಿ, ಶೇಖರಿಸುವ ವ್ಯವಸ್ಥೆ ಕಲ್ಪಿಸಲಾಗಿದ್ದು, ಈ ಮಾಹಿತಿಯಿಂದ ತನಿಖಾಧಿಕಾರಿಗಳು ಆರೋಪಿಯ ಬಗ್ಗೆ ಹಾಗೂ ವಂಚನೆಗಳ ಬಗ್ಗೆ ವಿಶ್ಲೇಷಿತ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ಸೈಬರ್ ಕ್ರೈಂ ಸಹಾಯವಾಣಿ-1930 ವನ್ನು ಮಾನ್ಯ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರಾದ ಎಸ್. ಮುರುಗನ್ ಐಪಿಎಸ್ ರವರ ಮಾರ್ಗದರ್ಶನದಲ್ಲಿ ಸುಧಾರಿತ ಸಾಫ್ಟ್‌ವೇರ್ ಹಾಗೂ ಮೂಲ ಸೌಕರ್ಯದೊಂದಿಗೆ ಅಂದಾಜು ವೆಚ್ಚ 01 ಕೋಟಿ ರೂಗಳಲ್ಲಿ ಉನ್ನತೀಕರಿಸಲಾಗಿದ್ದು, ಇದರಿಂದ ಹಣಕಾಸು ವಂಚನೆಗೊಳಗಾದ ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸುವುದಾಗಿದೆ. 1930 ಸಹಾಯವಾಣಿಯು ಸೈಬರ್ ಅಪರಾಧಗಳಿಗೆ ಒಳಗಾದ ನಾಗರೀಕರಿಗೆ ದಿನದ 24 ಗಂಟೆಗಳ ಕಾಲವೂ ಉತ್ತಮ ಸೇವೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

ಕಾರ್ಯಕ್ರಮದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಎಡಿಜಿಪಿ ಹಿತೇಂದ್ರ, ಆಡಳಿತ ವಿಭಾಗದ ಎಡಿಜಿಪಿ ಸೌಮೆಂದು ಮುಖರ್ಜಿ, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಹೆಚ್ಚುವರಿ ಮಹಾ ನಿರ್ದೇಶಕರಾದ ನಂಜುಂಡಸ್ವಾಮಿ ಹಾಗೂ ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಟಾರ್ ರಸ್ತೆ ಕಾಮಗಾರಿಗೆ ಭೂಮಿಪೂಜೆ

» ಹೊಳಲ್ಕೆರೆ

ನನ್ನ ಅವಧಿಯಲ್ಲಿ ತಾಲ್ಲೂಕಿನಾದ್ಯಂತ ಐದುನೂರಕ್ಕೂ ಹೆಚ್ಚು ಚೆಕ್‌ಡ್ಯಾಂಗಳನ್ನು ಕಟ್ಟಿಸಿದ್ದೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಗುಡ್ಡಸಾಂತೇನಹಳ್ಳಿ ಗ್ರಾಮದಲ್ಲಿ ತಿರುಮಲಾಪುರದಿಂದ ಗುಡ್ಡದಸಾಂತೇನಹಳ್ಳಿ ವರೆಗೂ ಒಂದು ಕೋಟಿ ಐವತ್ತು ಲಕ್ಷ ರೂ. ವೆಚ್ಚದಲ್ಲಿ ನೂತನ ಟಾರ್ ರಸ್ತೆ ಕಾಮಗಾರಿಗೆ ಬುಧವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ಬ್ರಿಡ್ಜ್ ಕಂ ಬ್ಯಾರೇಜ್ ಕಟ್ಟಿಸಿರುವುದರಿಂದ ಐದು ಕಿ.ಮೀ.ನಷ್ಟು ನೀರು ನಿಲ್ಲುತ್ತದೆ. ರಾಜಕಾರಣಿಗೆ ಬದ್ದತೆಯಿರಬೇಕು. ಏನೋ ಗೆದ್ದಿದ್ದೇನೆ. ಅಧಿಕಾರ ಸಿಕ್ಕಿದೆ. ಯಾರು ಏನು ಕೇಳಬೇಕು ಎನ್ನುವ ಅಹಂನಲ್ಲಿರಬಾರದು. 493 ಹಳ್ಳಿಗಳಲ್ಲಿಯೂ ಹುಡುಕಿ ಹುಡುಕಿ ಸರ್ವಾಂಗೀಣ ಅಭಿವೃದ್ದಿಯಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿರಬಹುದು. ಪ್ರತಿನಿತ್ಯವೂ ಕೋಟಿ ಕೋಟಿ ಹಣ ತಂದು ಕಾಮಗಾರಿಗಳಿಗೆ ಹಾಕುತ್ತಿದ್ದೇನೆ. ದೊಡ್ಡೊಟ್ಟೆ ರಂಗನಾಥಸ್ವಾಮಿ ದೇವಸ್ಥಾನದ ರಸ್ತೆಗೆ ಒಂದು ಕೋಟಿ ರೂ.ಗಳನ್ನು ನೀಡಿದ್ದೇನೆ. ನಿಮ್ಮೂರಿಗೆ ಒಂದುವರೆ ಕೋಟಿ ರೂ.ಗಳನ್ನು ಕೊಡುತ್ತೇನೆ. ಮುಂದಿನ ದಿನಗಳಲ್ಲಿ ಬ್ರಿಡ್ಜ್ ಕಟ್ಟಿಸುತ್ತೇನೆಂದು ತಿಳಿಸಿದರು.



ಒಂದು ಕೋಟಿ ರೂ.ಖರ್ಚು ಮಾಡಿ ಕೆರೆ ಏರಿ ಎತ್ತರ ಮಾಡುತ್ತೇನೆ. ಅಪ್ಪರ್‌ಭದ್ರಾ ಯೋಜನೆಯಿಂದ ಡಿಸೆಂಬರ್ ಒಳಗೆ ತಾಲ್ಲೂಕಿನಾದ್ಯಂತ ಎಲ್ಲಾ ಕೆರೆಗಳಿಗೂ ನೀರು ತುಂಬಿಸುತ್ತೇನೆ. 367 ಕೋಟಿ ರೂ.ಗಳನ್ನು ಖರ್ಚು ಮಾಡಿ ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ತಾಲ್ಲೂಕಿನಾದ್ಯಂತ ಪ್ರತಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸಲಾಗುವುದು. ಅದಕ್ಕಾಗಿ ಪೈಪ್‌ಲೈನ್ ಅಳವಡಿಕೆಯಾಗಿದೆ. ಒಂದೊಂದು ವಿದ್ಯುತ್ ಪವರ್ ಸ್ಟೇಷನ್‌ಗೆ 20 ರಿಂದ 22 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇನೆ. ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಹದಿಮೂರು ಎಕರೆ ಪ್ರದೇಶದಲ್ಲಿ ಐದುನೂರು ಕೋಟಿ ರೂ.ವೆಚ್ಚದಲ್ಲಿ ನಾಲ್ಕುನೂರು ಕೆ.ವಿ.ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣವಾಗಲಿದೆ. ಇದರಿಂದ ರೈತರಿಗೆ ಇನ್ನು ನೂರು ವರ್ಷಗಳ ಕಾಲ ವಿದ್ಯುತ್ ಸಮಸ್ಯೆ ಕಾಡುವುದಿಲ್ಲ. 25ಕೋಟಿರೂ.ವೆಚ್ಚದಲ್ಲಿತಾಲ್ಲೂಕು ಆಫೀಸ್ ಕಟ್ಟಿಸಿದ್ದೇನೆ. ಬಸ್‌ನಿಲ್ದಾಣ, ಹೈಟೆಕ್ ಆಸ್ಪತ್ರೆ ನಿರ್ಮಾಣವಾಗಿದೆ. ತಾಲ್ಲೂಕಿನಾದ್ಯಂತ ಎಲ್ಲಿಯೂ ಗದ್ದಲ, ಗಲಾಟೆಗೆ ಅವಕಾಶ ಕೊಟ್ಟಿಲ್ಲ. ಯಾರ ಮೇಲೂ ಅಟ್ರಾಸಿಟಿ ಕೇಸ್ ದಾಖಲಾಗಲು ಬಿಟ್ಟಿಲ್ಲ. ಎಲ್ಲಾ ಜಾತಿಯವರನ್ನು ಸಮಾನವಾಗಿ ಕಾಣುತ್ತಿದ್ದೇನೆಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಶಿವಪ್ಪ, ರಮೇಶ್, ತಿಮ್ಮಣ್ಣ, ಪಾಂಡುರಂಗಪ್ಪ, ಆನಂದಪ್ಪ, ತಿಪ್ಪೇಸ್ವಾಮಿ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಭಯೋತ್ಪಾದಕರಿಗೆ ಬಲಿಯಾದವರ ಆತ್ಮಕ್ಕೆ ಶಾಂತಿ ಕೋರಿ ಯುವ ಕಾಂಗ್ರೆಸ್‌ನಿಂದ ಸಂತಾಪ



» ಚಿತ್ರದುರ್ಗ

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ಭಯೋತ್ಪಾದಕರು ನಡೆಸಿದ ದಾಳಿಯಲ್ಲಿ 26 ಮಂದಿ ಬಲಿಯಾಗಿರುವುದನ್ನು ಖಂಡಿಸಿ ಜಿಲ್ಲಾ ಯುವ ಕಾಂಗ್ರೆಸ್‌ನಿಂದ ಗಾಂಧಿವೃತ್ತದಲ್ಲಿ ಬುಧವಾರ ಸಂಜೆ ಮೇಣದಬತ್ತಿ ಬೆಳಗಿ ಸಂತಾಪ ಸೂಚಿಸಲಾಯಿತು.

ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರೇಹಳ್ಳಿ ಉಲ್ಲಾಸ್ ನೇತೃತ್ವದಲ್ಲಿ ನಡೆದ ಮೌನ ಸಂತಾಪದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿ ಸಂಪತ್, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಯೂತ್ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ದಾದಾಪೀರ್, ವಸೀಂ, ಕಾರ್ಯದರ್ಶಿ ವೈಶಾಕ್‌ಯಾದವ್ ಉಪಾಧ್ಯಕ್ಷ ಸಮರ್ಥರಾಯ್, ನಗರಾಧ್ಯಕ್ಷ ಪವನ್, ಇಂಜುಮಾಮ್, ದರ್ಶನ್, ಮಹಂತೇಶ್, ಪ್ರಧಾನ ಕಾರ್ಯದರ್ಶಿ ಪವನ್ ಸೇರಿದಂತೆ ಯೂತ್ ಕಾಂಗ್ರೆಸ್‌ನ ಪದಾಧಿಕಾರಿಗಳು ಸಂತಾಪದಲ್ಲಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

ವಿಶ್ವ ಯುಕೃತ್ ದಿನದ ಅಂಗವಾಗಿ ಜಾಗೃತಿ ಕಾರ್ಯಕ್ರಮದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್ ಸಲಹೆ

# ಯಕೃತ್ತನ್ನು ಆರೋಗ್ಯಕರ, ರೋಗ ಮುಕ್ತವಾಗಿಡಿ

» ಚಿತ್ರದುರ್ಗ

ನಿಮ್ಮ ಯಕೃತ್ತನ್ನು ಆರೋಗ್ಯಕರವಾಗಿ ಮತ್ತು ರೋಗ ಮುಕ್ತವಾಗಿಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಬುಧವಾರ ವಿಶ್ವ ಯುಕೃತ್ ದಿನದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಏಪ್ರಿಲ್ 19ರಂದು ಸಾರ್ವಜನಿಕರಲ್ಲಿ ಯಕೃತ್ತಿನ ಕಾಯಿಲೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಆಚರಿಸಲಾಗುವ ಜಾಗತಿಕ ಆರೋಗ್ಯ ರಕ್ಷಣಾ ಕಾರ್ಯಕ್ರಮವಾಗಿದೆ. ವಿಶ್ವ ಯಕೃತ್ತಿನ ದಿನವು ಯಕೃತ್ತಿನ ಕಾಯಿಲೆಗಳ ತೀವ್ರತೆ, ಆರಂಭಿಕ ಪತ್ತೆ ಮತ್ತು ತಡೆಗಟ್ಟುವಿಕೆಯ ಬಗ್ಗೆ ಜನರಿಗೆ ಶಿಕ್ಷಣ ನೀಡುವ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುತ್ತದೆ. ಮಾನವ ದೇಹದಲ್ಲಿ ಎರಡನೇ ಅತಿದೊಡ್ಡ ಮತ್ತು ಅತ್ಯಂತ ಪ್ರಮುಖ ಅಂಗವಾಗಿರುವ ಯಕೃತ್ತು, ಚಯಾಪಚಯ ಕ್ರಿಯೆ, ಜೀರ್ಣಕ್ರಿಯೆ, ರೋಗನಿರೋಧಕ ಶಕ್ತಿ, ವಿಷಕಾರಿ ವಸ್ತುಗಳ ಶೋಧನೆ ಮತ್ತು ಜೀವಸತ್ವಗಳು,



ಖನಿಜಗಳು, ಗ್ಲೂಕೋಸ್ ಇತ್ಯಾದಿಗಳ ಸಂಗ್ರಹಣೆಯನ್ನು ಒಳಗೊಂಡಂತೆ ಆದರೆ ಇವುಗಳಿಗೆ ಸೀಮಿತವಾಗಿರದೆ ಹಲವಾರು ಕಾರ್ಯಗಳನ್ನು ನಿರ್ವಹಿಸುತ್ತದೆ ಎಂದರು.

ಯಕೃತ್ತು ಸ್ವಯಂ-ಗುಣಪಡಿಸುವ ವಿಶಿಷ್ಟಲಕ್ಷಣವನ್ನುಹೊಂದಿದ್ದರೂ, ಶೇ.60 ರಿಂದ 70 ರವರೆಗೆ ಹಾನಿಗೊಳಗಾದ ನಂತರ ಅದು ಮತ್ತೆ ಬೆಳೆಯಬಹುದು ಅಥವಾ ಪುನರುತ್ಪಾದಿಸಬಹುದು, ಯಕೃತ್ತಿನಲ್ಲಿನ ಯಾವುದೇ ಅಸಹಜತೆಗಳು ಗಂಭೀರ ಆರೋಗ್ಯ ತೊಡಕುಗಳಿಗೆ ಕಾರಣವಾಗಬಹುದು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾತನಾಡಿ, ಈ ವರ್ಷ-2025, ವಿಶ್ವ ಯಕೃತ್ತಿನ ದಿನದ ಥೀಮ್ " ಆಹಾರವೇ ಔಷಧ ". ಈ ಥೀಮ್ ಯಕೃತ್ತಿನ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಮತ್ತು ಸಂಪೂರ್ಣ ಆಹಾರಗಳಲ್ಲಿ ಹೆಚ್ಚಿನ ಸಮತೋಲಿತ ಆಹಾರದ ಮೂಲಕ ಯಕೃತ್ತಿನ ರೋಗಗಳನ್ನು ತಡೆಗಟ್ಟುವಲ್ಲಿ ಪೋಷಣೆಯ ನಿರ್ಣಾಯಕ ಪಾತ್ರವನ್ನು ಒತ್ತಿ ಹೇಳುತ್ತದೆ. ಆಹಾರದ ಆಯ್ಕೆಗಳು ಯಕೃತ್ತಿನ ಕಾರ್ಯವನ್ನು ಹೇಗೆ ಬೆಂಬಲಿಸುತ್ತವೆ ಮತ್ತು ಚಯಾಪಚಯ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಎಂಬುದನ್ನು ಇದು ಎತ್ತಿ ತೋರಿಸುತ್ತದೆ. ಆರೋಗ್ಯಕರ ಯಕೃತ್ತನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಕೆಲವು ಕ್ರಮಗಳು ಇಲ್ಲಿವೆ. ಪ್ರೋಟೀನ್ ಮತ್ತು ಫೈಬರ್ ಸಮೃದ್ಧವಾಗಿರುವ ಆರೋಗ್ಯಕರ ಮತ್ತು ಸಮತೋಲಿತ ಆಹಾರವನ್ನು ಸೇವಿಸಿ ಒತ್ತಡ ಕಡಿಮೆ ಮಾಡಲು ನಿಯಮಿತ ವ್ಯಾಯಾಮ ಮತ್ತು ಧ್ಯಾನ, ಮದ್ಯಪಾನ ಮತ್ತು ಧೂಮಪಾನವನ್ನು ತ್ಯಜಿಸಿ, ಸ್ವಯಂ-ಔಷಧಿ ತಪ್ಪಿಸಿ, ಸಮಯಕ್ಕೆ ಸರಿಯಾಗಿ ಲಸಿಕೆಗಳನ್ನು ತೆಗೆದುಕೊಳ್ಳುವುದು ಹಾಗೂ ಆರೋಗ್ಯಕರ ತೂಕವನ್ನು ಕಾಪಾಡಿಕೊಳ್ಳಿ ಎಂದರು.

ಇದೇ ಸಂದರ್ಭದಲ್ಲಿ ಕ್ಷಯ ರೋಗದ ಪ್ರಕರಣಗಳಿಗೆ ಪ್ರೋಟೀನ್ ಯುಕ್ತ ಆಹಾರ ಪಟ್ಟಣಗಳನ್ನು 3ನೇ ಬಾರಿ 35 ಜನರಿಗೆ ವಿತರಿಸಲಾಯಿತು

ಕಾರ್ಯಕ್ರಮದಲ್ಲಿ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಹಿರಿಯ ವೈದ್ಯಾಧಿಕಾರಿ ಡಾ.ತುಳಸಿ ರಂಗನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಜಿಲ್ಲಾ ಮೇಲ್ವಿಚಾರಕರಾದ ಮಹೇಂದ್ರಾ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನವೀನ್, ನಾಗರಾಜ್, ಚಂದ್ರಶೇಖರ ಅಜಯ್, ಇಸ್ಮಾಯಿಲ್ ಜಬಿಉಲ್ಲಾ, ರವಿಕುಮಾರ್ ಸಂಯೋಜಕರಾದ ಕಾವ್ಯ, ಮೊಹನ್ ಕುಮಾರ್, ಜಾನ್ ಮೈನ್ಸ್ ಸಿ.ಎಸ್.ಆರ್.ಮುಖ್ಯಸ್ಥ ಮಂಜುನಾಥ, ಮ್ಯಾನೇಜರ್ ಅಜಿತ್, ಸಾರ್ವಜನಿಕರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ: ಪತ್ತೆ ನೆರವಿಗೆ ಮನವಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಆದಿವಾಲ ಗ್ರಾಮದ ತಿರುಮಲ ನಗರ ನಿವಾಸಿ ನಾಗರಾಜ ತಂದೆ ಲೇ ತಿಮ್ಮಯ್ಯ (70) ಕಾಣೆಯಾದ ಕುರಿತು ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿ ನಾಗರಾಜ 5.6 ಅಡಿ ಎತ್ತರವಿದ್ದು, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲುಮುಖ ಹೊಂದಿರುತ್ತಾರೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೊರಡುವಾಗ ನೀಲಿ ಲುಂಗಿ ಪಂಚೆ, ಬಿಳಿ ಷರ್ಟ್ ಧರಿಸಿರುತ್ತಾರೆ. ಕಾಣೆಯಾದವರ ಗುರುತು ಪತ್ತೆಯಾದಲ್ಲಿ, ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣಾ ದೂರವಾಣಿ ಸಂಖ್ಯೆ:08193-263555, 8277985509, ಪೊಲೀಸ್ ವೃತ್ತ ನಿರೀಕ್ಷಕರ ಮೊಬೈಲ್ ಸಂಖ್ಯೆ 9480803115, ಪೊಲೀಸ್ ಉಪಾಧೀಕ್ಷಕರು ಹಿರಿಯೂರು ಉಪವಿಭಾಗ :08193-263499, ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ: 08194-222782 ಕರೆ ಮಾಡಿ ಮಾಹಿತಿ ನೀಡುವಂತೆ ಪೊಲೀಸ್ ಇಲಾಖೆ ತಿಳಿಸಿದೆ.

### ಅನಾಮಧೇಯ ವ್ಯಕ್ತಿ ಸಾವು ಪತ್ತೆಗೆ ಮನವಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಭರಮಸಾಗರ ಪೊಲೀಸ್ ಠಾಣೆ ವ್ಯಾಪ್ತಿಯ ಬಿರಾವಾರ ಗ್ರಾಮದ ಗುಳ್ಳಮ್ಮ ದೇವಿ ದೇವಸ್ಥಾನದ ಬಳಿ ಅನಾರೋಗ್ಯದಿಂದ ಬಳಲುತ್ತಿದ್ದ ಅನಾಮಧೇಯ ವ್ಯಕ್ತಿಯ ಗ್ರಾಮಸ್ಥರು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲಿಸಿರುತ್ತಾರೆ. ಈ ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೆ ಏಪ್ರಿಲ್ 20 ರಂದು ಮೃತಪಟ್ಟಿರುತ್ತಾರೆ. ಗೋಧಿ ಮೈ ಬಣ್ಣ ಹೊಂದಿರುತ್ತಾರೆ. ತುಂಬು ತೋಳಿನ ಬಿಳಿಯ ಬಣ್ಣದ ಶರ್ಟ್, ಕಾಫಿ ಬಣ್ಣದ ಜರಕಿನ್, ಕೆಂಪು ಬಣ್ಣದ ಡ್ರಾಯರ್, ನೀಲಿ ಮತ್ತು ಬಿಳಿ ಬಣ್ಣದ ಚೆಕ್ಸ್ ಪಂಚೆ ಧರಿಸಿರುತ್ತಾನೆ. ಮೃತ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ, ಭರಮಸಾಗರ ಪೊಲೀಸ್ ಠಾಣಾ 08194-258421, ಪೊಲೀಸ್ ವೃತ್ತ ನಿರೀಕ್ಷಕರ ಮೊಬೈಲ್: 9480803163, ಪೊಲೀಸ್ ಉಪಾಧೀಕ್ಷಕರು ಕಚೇರಿ ಸಂಖ್ಯೆ: 08194-222430, ಕಂಟ್ರೋಲ್ ರೂಂ: 08194-222781, ವಲಯ ಕಚೇರಿ ಸಂಖ್ಯೆ 08192-237830 ಕರೆ ಮಾಡಿ.

### ಹರಿಹರ ಗ್ರಂಥಾಲಯ ಶಾಖೆಯಲ್ಲಿ ವಿಶ್ವ ಪುಸ್ತಕ ಹಾಗೂ ಕೃತಿ ಸ್ವಾಮ್ಯದಿನಾಚರಣೆ



» ಹರಿಹರ

ಜಿಲ್ಲಾ ಕೇಂದ್ರ ಗ್ರಂಥಾಲಯ ಹರಿಹರ ಶಾಖಾ ಗ್ರಂಥಾಲಯದಲ್ಲಿ ಬುಧುವಾರ ರಂದು ವಿಶ್ವ ಪುಸ್ತಕ ಮತ್ತು ಕೃತಿ ಸ್ವಾಮ್ಯ ದಿನಾಚರಣೆಯನ್ನು ಜಿಲ್ಲಾ ಗ್ರಂಥಾಲಯ ಅಧಿಕಾರಿ ಹಾಗೂ ಓದುಗರ ಜೊತೆ ಆಚರಿಸಲಾಯಿತು. ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಪಿ. ಆರ್. ತಿಪ್ಪೇಸ್ವಾಮಿ ಮಾತನಾಡಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ವತಿಯಿಂದ ವಿಶ್ವ ಪುಸ್ತಕ ಮತ್ತು ಕೃತಿ ಸ್ವಾಮ್ಯ ದಿನಾಚರಣೆ ಯ ಅಂಗವಾಗಿ ವಿಲಿಯಮ್ ಷೇಕ್ಸ್‌ಪಿಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ.ಪುಸ್ತಕ,ಪತ್ರಿಕೆಗಳನ್ನು ಓದುವ ಹವ್ಯಾಸ ಮತ್ತು ಪುಸ್ತಕ ಸಂಸ್ಕೃತಿಯನ್ನು ಹೆಚ್ಚಿಸಲು ಪುಸ್ತಕ ಪ್ರದರ್ಶನ ಏರ್ಪಡಿಸುವದರೊಂದಿಗೆ ಸರಳವಾಗಿ ಆಚರಿಸಲಾಗುತ್ತದೆ.

1995 ರಲ್ಲಿ ಮೊದಲ ಬಾರಿಗೆ ಓದುವಿಕೆ, ಪ್ರಕಾಶನ ಮತ್ತು ಕೃತಿ ಸ್ವಾಮ್ಯಗಳ ಬಗ್ಗೆ ಅರಿವು ಮತ್ತು ಪ್ರಚಾರ ನೀಡಲು ಹಾಗೂ ಯುವ ಜನತೆಯಲ್ಲಿ ಪುಸ್ತಕ ಪ್ರೇಮ ಓದಿನ ಖುಷಿ ಹೆಚ್ಚಿಸಲು ಮತ್ತು ಉತ್ತಮ ಲೇಖಕರನ್ನು ಗೌರವಿಸುವ ಹಂಬಲದೊಂದಿಗೆ ರಾಷ್ಟ್ರಗಳು ಮತ್ತು ವಿಶ್ವದಾದ್ಯಂತ ಅನೇಕಾನೇಕ ಪುಸ್ತಕ ಪ್ರಕಾಶಕರು,ಪುಸ್ತಕ ವ್ಯಾಪಾರಿಗಳು,ಗ್ರಂಥಾಲಯಗಳು,ಶಾಲಾ ಕಾಲೇಜು ವಿಶ್ವ ವಿದ್ಯಾಲಯಗಳು, ಸಾಂಸ್ಕೃತಿಕ ಸಂಘಟನೆಗಳು ದಿನಾಚರಣೆಯಲ್ಲಿ ಭಾಗವಹಿಸಿ ಪುಸ್ತಕ ಮತ್ತು ಓದುವಿಕೆಯ ಮಹತ್ವ ಸಾರಿರುತ್ತವೆ. ಅಲ್ಲದೆ ಜ್ಞಾನ ಕಲ್ಪನೆ ಅನುಭವ ಪುಸ್ತಕಗಳು ಮಕ್ಕಳಲ್ಲಿ ಓದುವೀಕೆಯ ಮಹತ್ವ ಸಾರಿವೆ ಅಲ್ಲದೇ ಜ್ಞಾನ ಕಲ್ಪನೇ ಅನುಭವ ಪುಸ್ತಕಗಳು ಮಕ್ಕಳಲ್ಲಿ ಓದುವ ಅಭ್ಯಾಸ ಬೆಳೆಸಲು ಹಿರಿಯರಲ್ಲಿ ಜ್ಞಾನ ವಿಸ್ತಾರಗೊಳಿಸುವ ಅಮೂಲ್ಯ ಸಾಧನಗಳಾಗಿವೆ. ಜಗತ್ತಿನ ರಾಷ್ಟ್ರಗಳು ಪುಸ್ತಕ ಓದನ್ನು ಜ್ಞಾನ ಸಂಸ್ಕೃತಿ ಮಾನವೀತೆಯ ಬೆಳವಣಿಗೆಗೆ ಪೂರಕವೆಂದು ಪರಿಗಣಿಸಿವೆ ಎಂದು ಹೇಳಿದರು. ಈ ಸಮಯದಲ್ಲಿ ಶಾಖಾ ಪ್ರಭಾರಧಾರಕ ರವಿಕುಮಾರ್ ಹಾಗೂ ಸಂಜಯ್ ಪಿ, ಕೇಶವ ಎಸ್, ಸ್ಪರ್ಧಾತ್ಮಕ ಓದುಗರಾದ ದೀಪಾ, ಚಂದನಾ, ಪೂಜಾ, ಪ್ರದೀಪ್, ಅರುಣ್, ಮಂಜುನಾಥ್, ರವಿಕುಮಾರ್, ಮರೀದೇವ ಉಪಸ್ಥಿತರಿದ್ದರು.

# ಪಹಲ್ಗಾಮ್ ದಾಳಿ: ಬಿಜೆಪಿ ಮೌನ ಮೆರವಣಿಗೆ

» ಚಿತ್ರದುರ್ಗ

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿರುವ ದಾಳಿಗೆ 26 ಮಂದಿ ಬಲಿಯಾದ ಹಿನ್ನಲೆಯಲ್ಲಿ ಇಂದು ನಗರದಲ್ಲಿ ಭಾರತೀಯ ಜನತಾ ಪಾರ್ಟಿವತಿಯಿಂದ ಸಂತೇಪೇಟೆ ವೃತ್ತದಲ್ಲಿ ಮೊಂಬತ್ತಿಯನ್ನು ಹಚ್ಚಿ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ನಗರದ ನೀಲಕಂಠೇಶ್ವರ ದೇವಾಲಯದಿಂದ ಸಂತೇಪೇಟೆ ವೃತ್ತದವರೆಗೂಕೈಯಲ್ಲಿಮೊಂಬತ್ತಿಗಳನ್ನು ಹಚ್ಚಿಕೊಂಡು ಮೌನ ಮೆರವಣಿಗೆಯನ್ನು ನಡೆಸಿದ ಬಿಜೆಪಿ ಪದಾಧಿಕಾರಿಗಳು ಭಯೋತ್ಪಾದಕರನ್ನು ತಯಾರು ಮಾಡುತ್ತಿರುವ ಪಾಕಿಸ್ತಾನದ ವಿರುದ್ದ ಘೋಷಣೆಗಳನ್ನು ಕೂಗಿ ಮೃತರ ಕುಟುಂಬಗಳಿಗೆ ಸಾಂತ್ವಾನ ಹೇಳಿ ನಿಮ್ಮ ಜೊತೆಯಲ್ಲಿ ನಾವಿದ್ದೇವೆ ಎಂದು ಧೈರ್ಯವನ್ನು ತುಂಬಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಪಾಕಿಸ್ಥಾನ ಬೆಂಬಲಿತ ಉಗ್ರಗಾಮಿಗಳು ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ದಾಳಿ ನಡೆಸಿ ದೇಶದ ಶಾಂತಿಯನ್ನು ಕದಡುತ್ತಿದ್ದಾರೆ. ನಮ್ಮ ದೇಶದ ಪ್ರಧಾನಿ ಮೋದಿ ಹಾಗೂ ಗೃಹಮಂತ್ರಿ ಅಮಿತ್‌ಷಾ ಇವರುಗಳು ಉಗ್ರಗಾಮಿಗಳಿಗೆ ತಕ್ಕ ಪಾಠ ಕಲಿಸುತ್ತಾರೆ. ಪ್ರವಾಸಿಗರು ಯಾರೂ ಭಯ ಪಡುವುದು ಬೇಡ ಉಗ್ರಗಾಮಿಗಳು ನಡೆಸಿರುವ ದಾಳಿಯಲ್ಲಿ 26 ಮಂದಿ ಅಮಾಯಕರು ಬಲಿಯಾಗಿರುವುದನ್ನು ನಾವುಗಳು ಖಂಡಿಸುತ್ತೇವೆ. ದುಷ್ಟಕೂಟಕ್ಕೆ ನಮ್ಮ ದೇಶದ ಪ್ರಧಾನಿ ಮೋದಿರವರು ತಕ್ಕ ಪಾಠ ಕಲಿಸದೆ ಬಿಡುವುದಿಲ್ಲ ಎಂದು ತಿಳಿಸಿದರು.




ಭಾರತದ ಪ್ರವಾಸಿ ತಾಣ ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ 26 ಮಂದಿ ಬಲಿಯಾಗಿರುವುದು ಅತ್ಯಂತ ಖಂಡನೀಯ. ಈ ವಿಚಾರದಲ್ಲಿ ಯಾವ ಪಕ್ಷಗಳು ರಾಜಕಾರಣ ಮಾಡಬಾರದು. ದೇಶದ ಐಕ್ಯತೆ ದೃಷ್ಟಿಯಿಂದ ಎಲ್ಲರೂ ಒಗ್ಗಟ್ಟು ಪ್ರದರ್ಶಿಸಬೇಕು. ಒಟ್ಟಾರೆ ಪಹಲ್ಗಾಮ್ ದಾಳಿಗೆ ರಾಜಕೀಯ ಬಣ್ಣ ಹಚ್ಚುವುದು ಬೇಡ ಎಂದರು.

ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಬಿಜೆಪಿಯ ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ್‌ಸಿದ್ದಾಪುರ, ಸಂಪತ್ ಕುಮಾರ್, ರೈತ ಮೋರ್ಚಾದ ಕಾರ್ಯದರ್ಶಿ ಮಲ್ಲಿಕಾರ್ಜುನ್, ನವೀನ್ ಚಾಲುಕ್ಯ, ನಂದಿ ನಾಗರಾಜ್, ಭಾರ್ಗವಿ ದ್ರಾವಿಡ್, ಬಸಮ್ಮ, ಶಂಭು, ರಾಮು, ಹರೀಶ್, ಲೋಕೇಶ್ ಸಾರಂಗಮಠ, ಅರುಣ್ ಕುಮಾರಿ, ನಗರ ಮಂಡಲ ಅಧ್ಯಕ್ಷ ಲೋಕೇಶ್, ಗ್ರಾಮಾಂತರ ಮಂಡಲ ಅಧ್ಯಕ್ಷ ನಾಗರಾಜ್, ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್, ಮಾಧ್ಯಮ ವಕ್ತಾರ ದಗ್ಗೆ ಶಿವಪ್ರಕಾಶ್ ಹಾಜರಿದ್ದರು.

# ಭಕ್ತಿ, ಆವೇಶದ ನಡುವೆ ಹೊಸದುರ್ಗ ದುರ್ಗಮ್ಮ ಅದ್ದೂರಿ ಸಿಡಿಬಂಡಿ ಉತ್ಸವ



» ಹೊಸದುರ್ಗ

ಪಟ್ಟಣದ ಗ್ರಾಮ ದೇವತೆಯಾದ ದುರ್ಗಾಂಬಿಕ ದೇವತೆಯ ಸಿಡಿಬಂಡಿ ಉತ್ಸವ ಬುಧವಾರ ವಿಜೃಂಭಣೆಯಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ಜರುಗಿತು.

ಪಟ್ಟಣ ಸೇರಿದಂತೆ ಅಕ್ಕಪಕ್ಕದ ಹಳ್ಳಿಗಳಿಂದ ಆಗಮಿಸಿದ್ದ ಭಕ್ತರು ಶ್ರದ್ದೆ ಭಕ್ತಿಯಿಂಂದ ಉತ್ಸವಕ್ಕೆ ಸಾಕ್ಷಿಯಾದರು.ನೂಕು ನುಗ್ಗಲು ಹಾಗೂ ಹರ್ಷೋದ್ಗಾರಗಳ ನಡುವೆಯೇ ದೇವಿಯ ದರ್ಶನ ಪಡೆದರು.ದೇವಾಲಯದ ಸುತ್ತಮುತ್ತಲಿನ ರಸ್ತೆಗಳು ಹೆಜ್ಜೆ ಇಡಲು ಜಾಗವಿರದಷ್ಟು ಭಕ್ತರಿಂದ ಕಿಕ್ಕಿರಿದಿದ್ದವು. ಕಟ್ಟಡಗಳು, ಮರಗಳ ಮೇಲೂ ನಿಂತು ಭಕ್ತರು ಸಿಡಿಬಂಡಿಗೆ ಭಕ್ತಿಯಿಂದ ಕೈಮುಗಿದರು.

ಮದ್ಯಾಹ್ನ ಮೂರು ಗಂಟೆಯಿಂದಲೇ ಪಟ್ಟಣದ ಎಲ್ಲಾ ರಸ್ತೆಗಳಲ್ಲೂ ದುರ್ಗಮ್ಮನ ಭಕ್ತರು ದೊಡ್ಡ ಹೂ ಮಾಲೆ, ಮಂಗಳ ವಾದ್ಯಗಳೊಂದಿಗೆ ಮೆರವಣಿಗೆ ಮೂಲಕ ಸಾಗಿಬಂದಿದ್ದು ವಿಶೇಷವಾಗಿತ್ತು. ಮುಸ್ಸಂಜೆಯ ವೇಳೆಗೆ ಸಿಡಿಬಂಡಿ ಚಲಿಸಲು ಆರಂಭಿಸುತ್ತಿದ್ದಂತೆ ದುರ್ಗಮ್ಮನಿಗೆ ಜೈ ಘೋಷಣೆ ಎಲ್ಲೆಡೆ ಕೇಳಿ ಬಂದಿತು.ಮೊದಲು ದುರ್ಗಮ್ಮ ದೇವತೆಯನ್ನು 3 ಬಾರಿ ಪ್ರದರ್ಶಿಣೆ ಹಾಕಿಸಿದರು. ನಂತರ ಪ್ಲೇಗದಮ್ಮ ದೇವತೆಯನ್ನು 9 ಬಾರಿ ಪ್ರದರ್ಶಿಣೆ ಹಾಕಿಸುತ್ತಿರುವಾಗ ಭಕ್ತರು ದುರ್ಗಮ್ಮ-ಅಮ್ಮ-ಅಮ್ಮ, ಅಂತ ಕೂಗ ತೊಡಗಿದರು.

ಸಿಡಿ ಮಂಟಪದ ಸುತ್ತಲು ಕಿಕ್ಕಿರಿದು ಸೇರಿದ್ದ ಸಹಸ್ರಾರು ಭಕ್ತರು ಸಿಡಿ ಸುತ್ತುವಾಗ ಉದೋ ಉದೋ ಎನ್ನುತ್ತಾ ಬಾಳೇಹಣ್ಣುಗಳನ್ನ ದೇವರಿಗೆ ತೂರುತ್ತಾ ಭಕ್ತಿಯನ್ನ ಸಮರ್ಪಿಸಿದರು.

ಭಕ್ತರ ಮನೆಯಿಂದ ಬಂದ ಎಡೆಪೂಜೆ, ಅನ್ನದ ಬಲಿ ನಂತರ ಸಿಡಿ ಉತ್ಸವ ಚಾಲನೆಗೊಂಡಿತು. ಸಿಡಿ ಮರವನ್ನು ತಳಿರು ತೋರಣಗಳಿಂದ ಬಣ್ಣ, ಬಣ್ಣದ ಹೂವಿನಿಂದ ಅಲಂಕೃತವಾಗಿತ್ತು, ಲಯಬದ್ದ ಉರುಮೆವಾದದ ತಾಳಕ್ಕೆ ತಕ್ಕಂತೆ ಸೋಮನ ಕುಣಿತ ನಡೆಯಿತು. ಸಿಡಿ ಉತ್ಸವದ ಸಂಧರ್ಬದಲ್ಲಿ, ಸಿಪಿಐ ರಮೇಶ್ ನೇತೃತ್ವದಲ್ಲಿ ಪೋಲೀಸ್ ಬಿಗಿ ಬಂದೂಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

### ಧರ್ಮದ ಹೆಸರು ಹೇಳಿ ಕೊಲ್ಲುವುದು ಹೊಸತಲ್ಲ : ಉಗ್ರರ ದಾಳಿ ಬಗ್ಗೆ ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆ

» ಬೆಂಗಳೂರು

ಪುಲ್ವಾಮಾ ದಾಳಿ ನಂತರ ಇಲ್ಲಿಯವರೆಗೆ ಇಂತಹ ದುರ್ಘಟನೆಗಳು ನಡೆದಿರಲಿಲ್ಲ. ಹಿಂದೂಗಳನ್ನು ಗುರಿ ಮಾಡಿದ್ದಾರೆ. ದಾಳಿ ವೇಳೆ ನೀನು ಹಿಂದೂ ಅದಕ್ಕಾಗಿ ಕೊಲ್ಲುತ್ತಿದ್ದೇವೆ ಎಂದು ಭಯೋತ್ಪಾದಕರು ಹೇಳಿಕೊಂಡಿರುವುದು ನಿಜಕ್ಕೂ ಆತಂಕಕಾರಿ ವಿಚಾರ. ಇದು ಹೊಸದಲ್ಲ ಅನ್ನಿಸುತ್ತದೆ. ದಾಳಿ ಮಾಡುವಾಗ ಅನೇಕ ಸಂದರ್ಭದಲ್ಲಿ ಆ ಮಾತುಗಳನ್ನು ಹೇಳಿದ್ದಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆ ನೀಡಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಬಹಳ ಶಕ್ತಿಯುತ, ಪರಿಣಾಮಕಾರಿಯಾದ ಮಿಲಿಟರಿ ಇಂಟೆಲಿಜೆನ್ಸ್ ಇದ್ದರೂ ಸಹ ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿ ಹೇಗಾಯ್ತು ಎಂಬುದು ಅತಿದೊಡ್ಡ ಪ್ರಶ್ನೆಯಾಗಿದೆ.ಅನೇಕ ಸಂದರ್ಭಗಳಲ್ಲಿ ಮಿಲಿಟರಿ ಇಂಟಲಿಜೆನ್ಸ್ ಒಳ್ಳೆಯ ಕೆಲಸ ಮಾಡಿದೆ. ಯಾಕೆ ಇಂಟಲಿಜೆನ್ಸ್ ಫೆಲ್ಯೂರ್ ಆಯ್ತು?. ಟೆರರಿಸ್ಟ್‌ಗಳು ಎಲ್ಲಿಂದ, ಹೇಗೆ ಬಂದ್ರು ಎಂಬುದು ಅತಿದೊಡ್ಡ ಪ್ರಶ್ನೆ ಎಂದರು. ಕೃತ್ಯಕ್ಕೆ ಸ್ಥಳೀಯರ ಸಹಕಾರ ಇದ್ದುಕೊಂಡೇ ಆಗಿರಲಿ ಅಥವಾ ಸ್ಥಳೀಯರ ಸಹಕಾರ ಇಲ್ಲದೆಯೂ ಆಗಿರಲಿ. ನಮ್ಮ ಫೋರ್ಸ್ ಒಳಗಡೆ ಯಾರಾದರೂ ಸಹಕಾರ ಮಾಡಿದವರು ಇದ್ದರು ಸಹ ಅದನ್ನೆಲ್ಲ ಪತ್ತೆಹಚ್ಚಿ, ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಬೇಕು. ಇದು ನಮ್ಮ ದೇಶದ ಪ್ರಶ್ನೆ. ಹೆಚ್ಚಿನ ರೀತಿಯಲ್ಲಿ ಕ್ರಮಗಳನ್ನು ತೆಗೆದುಕೊಳ್ಳಬೇಕು.ಕಾಶ್ಮೀರ ಕಣಿವೆಯಲ್ಲಿ ನಡೆದ ಭಯೋತ್ಪಾದಕರ ದಾಳಿಯನ್ನು ಖಂಡಿಸುತ್ತೇನೆ. ಪ್ರಾಣ ಕಳೆದುಕೊಂಡಿರುವ ಆತ್ಮಕ್ಕೆ ಶಾಂತಿ ಕೋರುತ್ತೇನೆ. ಕುಟುಂಬ ವರ್ಗದವರಿಗೆ ನೋವನ್ನು ಭರಿಸುವ ಶಕ್ತಿ ನೀಡಲಿ ಅಂತ ಭಗವಂತನಲ್ಲಿ ಪ್ರಾರ್ಥಿಸುವೆ ಎಂದು ತಿಳಿಸಿದರು.

### ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರ ಸ್ವಾಮಿ ದೇವಸ್ಥಾನದ ಹುಂಡಿಯಲ್ಲಿ 66.29 ಲಕ್ಷ ಹಣ ಸಂಗ್ರಹ.



» ಚಳ್ಳಕೆರೆ

ರಾಜ್ಯದ ಪ್ರತಿಷ್ಠಿತ ದೇವಸ್ಥಾನಗಳಲ್ಲಿ ಒಂದಾದ ಲಕ್ಷಾಂತರ ಭಕ್ತರ ಆರಾಧ್ಯ ದೈವ ನಾಯಕನಹಟ್ಟಿ ಗುರುತಿಪ್ಪೇರುದ್ರಸ್ವಾಮಿ ಜಾತ್ರೆ ಹಾಗೂ ಮರಿಪರಿಷೆ ಮುಕ್ತಾಯವಾಗಿದ್ದು, ದೇವಸ್ಥಾನದ ಹುಂಡಿಹಣ ಏಣಿಕೆ ಕಾರ್ಯ ಬುಧವಾರ ಬೆಳಗ್ಗೆ ದೇವಸ್ಥಾನದ ಆವರಣದಲ್ಲಿ ನಡೆಯಿತು.

ತಹಶೀಲ್ದಾರ್ ರೇಹಾನ್‌ಪಾಷ, ಪರವಾಗಿ ಶಿರಸ್ತೇದಾರ್ ಸದಾಶಿವ ದೇವಸ್ಥಾನ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ, ಸತೀಶ್, ಶಕುಂತಲ, ಭಕ್ತರ ಸಮ್ಮುಖದಲ್ಲಿ ಹುಂಡಿ ಏಣಿಕೆ ಕಾರ್ಯ ಸುಮಾರು ಐದು ಗಂಟೆಗಳಿಗೂ ಹೆಚ್ಚು ಕಾಲ ನಡೆದಿದ್ದು, ಒಳಮಠದಲ್ಲಿ 4,72,9060, ಹೊರಮಠದಲ್ಲಿ 19,000,19 ಒಟ್ಟು 66,29,155 ಲಕ್ಷ ಹಣ ಹುಂಡಿಯಲ್ಲಿ ಸಂಗ್ರಹವಾಗಿದೆ. ಪೊಲೀಸ್ ಇಲಾಖೆ ಹಾಗೂ ಬ್ಯಾಂಕ್ ಅಧಿಕಾರಿಗಳೂ ಸಹ ಹುಂಡಿ ಹಣ ಏಣಿಕೆ ಕಾರ್ಯದಲ್ಲಿ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# 40ಕ್ಕೂ ಹೆಚ್ಚು ಭಕ್ತರಿಗೆ ಕಹಿಯಾದ ಮಾರಮ್ಮ ದೇವಿಯ ಹೋಳಿಗೆ ಊಟ: ವಾಂತಿ, ಬೇದಿ; ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ

» ಚಳ್ಳಕೆರೆ

ತಾಲ್ಲೂಕಿನ ರೆಡ್ಡಿಹಳ್ಳಿ ಗ್ರಾಮದಲ್ಲಿರುವ ಮಾರಮ್ಮದೇವಿಗೆ ಪ್ರತಿಮಂಗಳವಾರ ಭಕ್ತರು ಸಿಹಿ ಹೋಳಿಗೆ ಸಿದ್ದಪಡಿಸಿ ದೇವರಿಗೆ ಅರ್ಪಿಸಿ ಭಕ್ತರಿಗೆ ಹೋಳಿಗೆ ಊಟವನ್ನು ಉಣಬಡಿಸುವುದು ವಾಡಿಕೆಯಾಗಿದೆ. ಕಳೆದ ಹಲವಾರು ವರ್ಷಗಳಿಂದ ಈ ಪದ್ದತಿ ನಡೆದುಬಂದಿದ್ದು, ದೇವಿಗೆ ಹರಿಕೆ ಹೊತ್ತವರು ಹೋಳಿಗೆ ಊಟವನ್ನು ಭಕ್ತರಿಗೆ ನೀಡುತ್ತಾರೆ.

ಅದರಂತೆ ಏ.22ರ ಮಂಗಳವಾರ ಮಧ್ಯಾಹ್ನ ಪೂಜೆ ನಂತರ ಅಲ್ಲಿದ್ದ ಭಕ್ತರಿಗೆ ಹೋಳಿಗೆ ಊಟ ನೀಡಲಾಗಿದೆ. ಊಟ ಸೇವಿಸಿದ ಮೇಲೆ ಯಾವುದೇ ಪರಿಣಾಮ ಆಗದಿದ್ದರೂ ಸಂಜೆ ಮಾತ್ರ ಕೆಲವರಿಗೆ ವಾಂತಿ, ಭೇದಿ ಆರಂಭವಾಗಿದೆ. ಬುಧವಾರ ಬೆಳಗ್ಗೆ ಇನ್ನೂ ಹೆಚ್ಚು ಜನ ವಾಂತಿ, ಬೇದಿ ಆರಂಭವಾದಾಗ ಗೋಪನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಸುಮಾರು 20ಕ್ಕೂ ಹೆಚ್ಚು ಜನರಿಗೆ ಚಿಕಿತ್ಸೆ ನೀಡಿ ಕಳಿಸಲಾಗಿದೆ. ಬುಧವಾರ ಮಧ್ಯಾಹ್ನ 4ರ



ಸಮಯದಲ್ಲಿ ಹೋಳಿಗೆ ಊಟ ಮಾಡಿದವರಿಗೆ ಮತ್ತೆ ವಾಂತಿ, ಬೇಧಿ ಆರಂಭವಾಗಿದೆ ಸುಮಾರು 40ಕ್ಕೂ ಹೆಚ್ಚು ಜನರಿಗೆ ವಾಂತಿ, ಬೇದಿಯಾಗಿದ್ದು ಗಾಬರಿಗೊಂಡ ಭಕ್ತರು ಕೂಡಲೇ ಸಾರ್ವಜನಿಕ ಆಸ್ಪತ್ರೆ ದಾಖಲಾಗಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ವಯೋವೃದ್ದರು, ಮಹಿಳೆಯರು, ಪುರುಷರು, ಮಕ್ಕಳಿದ್ದು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದಾರೆ.

ಸುದ್ದಿ ತಿಳಿದ ತಹಶೀಲ್ದಾರ್ ರೇಹಾನ್‌ಪಾಷ ಆಸ್ಪತ್ರೆಗೆ ದಾಖಲಿಸಿ ರೋಗಿಗಳ ಯೋಗಕ್ಷೇಮ ವಿಚಾರಿಸಿದ್ದಾರೆ. ಈ ಸಂದರ್ಭದಲ್ಲಿ ವಾಂತಿ, ಬೇದಿಯಿಂದ ಆಸ್ಪತ್ರೆಗೆ ದಾಖಲಾದ ಹಲವಾರು ರೋಗಿಗಳುಯಾವಕಾರಣದಿಂದವಾಂತಿಯಾಗಿದೆ ಎಂಬುವುದು ತಿಳಿಯುತ್ತಿಲ್ಲ, ಗ್ರಾಮದಲ್ಲಿ ನೀರು ಕಾಣರವೇ ಅಥವಾ ಬೇರೆಯಾವುದು ಸಮಸ್ಯೆ ಎಂಬ ಬಗ್ಗೆ ಗ್ರಾಮಸ್ಥರು ಯಾವುದೇ ನೀಡುತ್ತಿಲ್ಲ. ಒಟ್ಟಿನಲ್ಲಿ ಗಾಬರಿಯಿಂದ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದಾರೆ.

ಕರ್ತವ್ಯ ನಿರತ ವೈದ್ಯ ಡಾ.ಡಿ.ಆರ್.ಮಂಜಪ್ಪ ರೋಗಿಗಳಿಗೆ ತುರ್ತು ಚಿಕಿತ್ಸೆ ನೀಡಿ ಯಾವ ಕಾರಣದಿಂದ ವಾಂತಿ, ಬೇದಿಯಾಗುತ್ತಿದೆ ಎಂಬ ಬಗ್ಗೆ ಇನ್ನು ತಿಳಿದಿಲ್ಲ. ಆಸ್ಪತ್ರೆಗೆ ದಾಖಲಾದ ಎಲ್ಲಾ ರೋಗಿಗಳಿಗೆ ತ್ವರಿತಗತಿಯಲ್ಲಿ ಚಿಕಿತ್ಸೆ ನೀಡಲಾಗಿದೆ. ಪೊಲೀಸರು ಆಗಮಿಸಿ ಮಾಹಿತಿ ಪಡೆದಿದ್ದಾರೆ. ಪ್ರಸ್ತುತ ಬಹುತೇಕ ಎಲ್ಲಾ ರೋಗಿಗಳು ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗುತ್ತಿದ್ದಾರೆ. ಯಾವುದೇ ಪ್ರಾಣಾಪಾಯವಿಲ್ಲವೆಂದು ತಿಳಿಸಿದ್ದಾರೆ.



ಚಳ್ಳಕೆರೆ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೆಡ್ಡಿಹಳ್ಳಿ ಊಟದಿಂದ ಅಸ್ವಸ್ಥರಾದ ರೋಗಿಗಳ ಯೋಗಕ್ಷೇಮ ವಿಚಾರಿಸಿದ ತಹಶೀಲ್ದಾರ್.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T